# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ –229 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ: 03–04–2025 ಗುರುವಾರ | ಪುಟ: 4 | ಬೆಲೆ : ರೂ.2–00
Volume - 02 Issue - 229 | RNI No: KARKAN/2023/88462 | KA/SK/CTA-874/2024-2026 | Chitradurga | Date: 03-04-2025 Thursday | Page: 4 | Price: Rs. 2-00



ಒಳಪುಟದ ಸುದ್ದಿಗಳು
ದೇವರ ಮೇಲಿನ ಅಪಾರವಾದ ಭಕ್ತಿ, ಶ್ರದ್ಧೆ ನಮಗೆ ಉತ್ತಮ ಬದುಕನ್ನು ನೀಡುತ್ತದೆ 2
ಕನಸು ನನಸಾಗಲು ನಿರಂತರ ಪ್ರಯತ್ನ ಇರಲಿ, ಶಿಕ್ಷಣದ ಮೂಲಕ ರಾಷ್ಟ್ರಕ್ಕೆ ಕೊಡುಗೆ ನೀಡಿ 3
ಆಶಾ ಕಿರಣ ಯೋಜನೆ: ನಾಗರೀಕರಿಗೆ ಉಚಿತ ಕನ್ನಡಕ ವಿತರಣೆ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷರ ಜಿಲ್ಲಾ ಪ್ರವಾಸ

» ಚಿತ್ರದುರ್ಗ

ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಕೆ.ನಾಗಣ್ಣ ಗೌಡ ಅವರು ಇದೇ ಏ.03ರಂದು ಹಾಗೂ ಸದಸ್ಯ ಡಾ.ಕೆ.ಟಿ.ತಿಪ್ಪೇಸ್ವಾಮಿ ಅವರು ಏ.07ರಂದು ಚಿತ್ರದುರ್ಗ ಜಿಲ್ಲಾ ಪ್ರವಾಸ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ. ಆಯೋಗದ ಅಧ್ಯಕ್ಷ ಕೆ.ನಾಗಣ್ಣ ಗೌಡ ಅವರು ಏ.03ರಂದು ಮಧ್ಯಾಹ್ನ 12.30ಕ್ಕೆ ಚಿತ್ರದುರ್ಗ ನಗರದ ಶ್ರೀ ಶಿವಶರಣ ಮಾದಾರ ಚೆನ್ನಯ್ಯ ಗುರುಪೀಠದಲ್ಲಿ ನಡೆಯುವ ತರಬೇತಿ ಕಾರ್ಯಕ್ರಮದಲ್ಲಿ ಭಾಗವಹಿಸುವರು. ನಂತರ ಮಧ್ಯಾಹ್ನ 2.30ಕ್ಕೆ ಸಮಾಜ ಕಲ್ಯಾಣ ಮತ್ತು ಶಿಕ್ಷಣ ಇಲಾಖೆಯ ಅಧಿಕಾರಿಗಳೊಂದಿಗೆ ಪರಿಶೀಲನಾ ಸಭೆ ನಡೆಸುವರು. ಸಂಜೆ 5ಕ್ಕೆ ಬೆಂಗಳೂರಿಗೆ ಪ್ರಯಾಣ ಬೆಳೆಸುವರು. ಆಯೋಗದ ಸದಸ್ಯ ಡಾ.ಕೆ.ಟಿ.ತಿಪ್ಪೇಸ್ವಾಮಿ ಅವರು ಏ.07ರಂದು ಬೆಳಿಗ್ಗೆ 11 ರಿಂದ 1.30 ರವರೆಗೆ ಜಿಲ್ಲೆಯ ಮಕ್ಕಳ ವಿಶೇಷ ಪೊಲೀಸ್ ಘಟಕದ ಅಧಿಕಾರಿಗಳೊಂದಿಗೆ ಪರಿಶೀಲನಾ ಸಭೆ ಹಾಗೂ ಮಧ್ಯಾಹ್ನ 3 ರಿಂದ 4.30 ರವರೆಗೆ ನೀರಿನಲ್ಲಿ ಬಿದ್ದು ಮಕ್ಕಳು ಸಾವನಪ್ಪುತ್ತಿರುವ ಪ್ರಕರಣಗಳನ್ನು ತಡೆಗಟ್ಟುವ ಸಂಬಂಧ ಕೃಷಿ ಇಲಾಖೆ, ತೋಟಗಾರಿಕೆ, ಅಗ್ನಿಶಾಮಕ ಇಲಾಖೆ ಹಾಗೂ ಗಣಿ ಮತ್ತು ಭೂವಿಜ್ಞಾನ ಇಲಾಖೆ ಅಧಿಕಾರಿಗಳೊಂದಿಗೆ ಜಿಲ್ಲಾಮಟ್ಟದಲ್ಲಿ ಪರಿಶೀಲನಾ ಸಭೆಯನ್ನು ಜಿಲ್ಲಾ ಬಾಲಭವನ ಸಭಾಂಗಣದಲ್ಲಿ ನಡೆಸಲಿದ್ದಾರೆ ಎಂದು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸಿ.ಸವಿತಾ ತಿಳಿಸಿದ್ದಾರೆ.

### ಉಚಿತ ಷಟಲ್ ಬ್ಯಾಡ್ಮಿಂಟನ್ ತರಬೇತಿ

» ಚಿತ್ರದುರ್ಗ

ಖೇಲೋ ಇಂಡಿಯಾ ಯೋಜನೆಯಡಿ ಚಿತ್ರದುರ್ಗ ನಗರದ ಬಾಲಕ ಮತ್ತು ಬಾಲಕಿಯರಿಗೆ ಉಚಿತ ಷಟಲ್ ಬ್ಯಾಡ್ಮಿಂಟನ್ ತರಬೇತಿ ನೀಡಲಾಗುವುದು. ಆಸಕ್ತಿಯುಳ್ಳ 6 ರಿಂದ 14 ವರ್ಷದೊಳಗಿನ ಬಾಲಕ ಹಾಗೂ ಬಾಲಕಿಯರು ಪಾಸ್ ಪೋರ್ಟ್ ಸೈಜ್ ಫೋಟೋ, ಆಧಾರ್ ಕಾರ್ಡ್, ಜನನ ಪ್ರಮಾಣ ಪತ್ರ, ಜಾತಿ ಪ್ರಮಾಣ ಪತ್ರಗಳೊಂದಿಗೆ ವೀರವನಿತೆ ಓಬವ್ವ ಒಳಾಂಗಣ ಕ್ರೀಡಾಗಂಣದಲ್ಲಿ, ತರಬೇತುದಾರ ಜಿ.ಕೆ.ಗುರುಮೂರ್ತಿ ಅವರ ಬಳಿ ಹೆಸರು ನೊಂದಾಯಿಸಬಹುದು. ನೊಂದಣಿಗೆ ಏಪ್ರಿಲ್ 10 ಕಡೆಯ ದಿನವಾಗಿದೆ. ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ 9481038141 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

### ದೆಕೋ ಅಪ್‌ನ ದೇಶ್ ಫೋಟೋ ಕಾಂಟೆಸ್ಟ್

» ಚಿತ್ರದುರ್ಗ

ಜಿಲ್ಲೆಯ ಪ್ರವಾಸೋದ್ಯಮ ಅಭಿವೃದ್ಧಿ ಪಡಿಸುವ ಹಾಗೂ ಮೇಲ್ದರ್ಜೆಗೆರಿಸುವ ದೃಷ್ಟಿಯಿಂದ ಕೇಂದ್ರ ಪ್ರವಾಸೋದ್ಯಮ ಇಲಾಖೆಯಿಂದ 'ಡಿಸ್ಕವರ್ ದ ಬ್ಯೂಟಿ ಆಫ್ ಇಂಡಿಯಾ' ಶೀರ್ಷಿಕೆಯಡಿ ದೆಕೋ ಅಪ್‌ನ ದೇಶ್ ಫೋಟೋ ಕಾನ್ಟೆಸ್ಟ್–2025 ಸ್ಪರ್ಧೆ ಆಯೋಜಿಸಲಾಗಿದೆ. ಆಸಕ್ತರು ಜಿಲ್ಲೆಯೊಳಗಿನ ಐತಿಹಾಸಿಕ ಸ್ಮಾರಕಗಳು, ವನ್ಯಜೀವಿ, ಜಿಐ ಟ್ಯಾಗ್ ಹೊಂದಿರುವ ಕರಕುಷಲ ವಸ್ತು ಹಾಗೂ ನೇಕಾರಿಕೆ, ಭೂದೃಶ್ಯಹಾಗೂಸಾಹಸತಾಣಗಳಿಗೆಸಂಬಂದಿಸಿದ ಆತ್ಯಾಕರ್ಷಕ ಛಾಯಾಚಿತ್ರಗಳನ್ನು ಸೆರೆ ಹಿಡಿದು, ಕಿರು ವಿವರಣೆಯೊಂದಿಗೆ ಏಪ್ರಿಲ್ 7ರ ಒಳಗಾಗಿ Dekhoapnadeshphotos@gmail.com ನೇರವಾಗಿ ಇ–ಮೇಲ್ ಮುಖಾಂತರ ಕಳುಹಿಸಿ ಕೊಡುವಂತೆ ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿ ಅಧ್ಯಕ್ಷರಾದ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಗೊರ್ಲತ್ತು ಗ್ರಾಮದ ಪೇದೆ ಬಿ.ಎಂ.ಮಂಜುನಾಥಗೆ ಮುಖ್ಯಮಂತ್ರಿ ಪದಕ

» ಚಳ್ಳಕೆರೆ

ತಾಲ್ಲೂಕಿನ ಪರಶುರಾಮಪುರ ಹೋಬಳಿಯ ಗೊರ್ಲತ್ತು ಗ್ರಾಮದ ಪೊಲೀಸ್ ಪೇದೆ ಬಿ.ಎಂ. ಮಂಜುನಾಥ ಪ್ರಸ್ತುತ ಚಿತ್ರದುರ್ಗ ಜಿಲ್ಲಾ ರಕ್ಷಣಾಧಿಕಾರಿಗಳ ಕಚೇರಿ ಡಿಸಿಆರ್‌ಬಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಅನೇಕ ಪ್ರಕರಣಗಳ ಪತ್ತೆ ಕಾರ್ಯದಲ್ಲಿ ನೆರವಾದ ಇವರಿಗೆ ಮುಖ್ಯಮಂತ್ರಿಗಳ ಪದಕ ನೀಡಿ ಸರ್ಕಾರ ಗೌರವಿಸಲಾಗಿದೆ.

---

ಪೊಲೀಸ್ ಧ್ವಜ ಹಾಗೂ ಕಲ್ಯಾಣ ದಿನಾಚರಣೆಯಲ್ಲಿ ನಿವೃತ್ತ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಅಭಿಮತ

# ಸಮಾಜದಲ್ಲಿ ಶಾಂತಿ ಕಾಪಾಡುವಲ್ಲಿ ಪೊಲೀಸ್ ಸೇವೆ ಅನನ್ಯ: ಜ್ಞಾನಮೂರ್ತಿ

» ಚಿತ್ರದುರ್ಗ





ಇಂದಿನ ಪರಿಸ್ಥಿತಿಯಲ್ಲಿ ಉತ್ತಮ ರಾಜ್ಯ, ರಾಷ್ಟ್ರ ನಿರ್ಮಾಣ ಹಾಗೂ ಸಮಾಜದ ಶಾಂತಿ, ನೆಮ್ಮದಿ ಕಾಪಾಡಲು ಪೊಲೀಸ್ ಸೇವೆ ಅತ್ಯವಶ್ಯಕವಾಗಿದೆ ಎಂದು ನಿವೃತ್ತ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಹೆಚ್.ಆರ್. ಜ್ಞಾನಮೂರ್ತಿ ಅಭಿಪ್ರಾಯಪಟ್ಟರು.

ನಗರದ ಡಿಎಆರ್ ಪೊಲೀಸ್ ಕವಾಯತು ಮೈದಾನದಲ್ಲಿ ಬುಧವಾರ ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ ಹಮ್ಮಿಕೊಂಡಿದ್ದ ಕರ್ನಾಟಕ ರಾಜ್ಯ ಪೊಲೀಸ್ ಧ್ವಜ ಹಾಗೂ ಕಲ್ಯಾಣ ದಿನಾಚರಣೆಯಲ್ಲಿ ಗೌರವ ವಂದನೆ ಸ್ವೀಕರಿಸಿ ಅವರು ಮಾತನಾಡಿದರು.

ಸಮಾಜ ವಿರೋಧಿ ಚಟುವಟಿಕೆಗಳನ್ನು ಮಟ್ಟ ಹಾಕಲು ಹಾಗೂ ದುರ್ಬಲ ವರ್ಗದವರಿಗೆ ನ್ಯಾಯ ದೊರಕಿಸಿ ಕೊಡಲು ಪೊಲೀಸ್ ಇಲಾಖೆಯ ಕಾರ್ಯ ಮಹತ್ತರವಾದುದು. ರಾಜ್ಯ ಸರ್ಕಾರದ ಸೇವೆಗಳಲ್ಲಿ ಇತರೆ ಇಲಾಖೆಗಳಿಗಿಂತಲೂ ಪೊಲೀಸ್ ಇಲಾಖೆಯ ಕಾರ್ಯ ಮಹತ್ವದ್ದಾಗಿದೆ. ಇಲಾಖೆಯಲ್ಲಿ ಶ್ರದ್ಧೆ, ಪರಿಶ್ರಮ, ನಿಷ್ಪಕ್ಷಪಾತದಿಂದ ಕರ್ತವ್ಯ ನಿರ್ವಹಿಸಿದರೆ ಸಾರ್ವಜನಿಕರಿಂದ ಮೆಚ್ಚುಗೆ ವ್ಯಕ್ತವಾಗಲಿದೆ ಎಂದು ಕಿವಿಮಾತು ಹೇಳಿದರು.

ಹಗಲಿರುಳು ದುಡಿಯುವ ಪೊಲೀಸ್ ಇಲಾಖೆಯ ಪೊಲೀಸರಿಗೆ ಇಲಾಖೆಯಿಂದ ಆರೋಗ್ಯ ಭಾಗ್ಯ ಯೋಜನೆಯಡಿಯಲ್ಲಿ ತನ್ನ ಕುಟುಂಬದ ಎಲ್ಲ ಸದಸ್ಯರಿಗೂ ಚಿಕಿತ್ಸೆ ಕಲ್ಪಿಸಿರುವುದು ತುಂಬಾ ಅನುಕೂಲಕರವಾಗಿದೆ. ಪೊಲೀಸ್ ಇಲಾಖೆಯಿಂದ ಪ್ರತಿ ತಿಂಗಳು ನಿವೃತ್ತಿ ಹೊಂದುವ ಪೊಲೀಸರಿಗೆ ಜಿಲ್ಲಾ ಪೊಲೀಸ್ ಅಧೀಕ್ಷಕರ ಕಚೇರಿಯಲ್ಲಿ ಕರ್ತವ್ಯದ ಕೊನೆಯ ದಿನದಂದೇ ಬೀಳ್ಕೊಡುಗೆ ಸಮಾರಂಭ ನೀಡುತ್ತಿರುವುದು ಸಂತಸದ ಸಂಗತಿ ಎಂದು ಶ್ಲಾಘಿಸಿದರು.

ಅಪರಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಮಾತನಾಡಿ, ನಾಗರೀಕರೆಲ್ಲರೂ ಶಾಂತಿ, ನೆಮ್ಮದಿಯಿಂದ ಇರಲು ಹೆಮ್ಮೆಯ ಪೊಲೀಸರು ಕಾರಣ. ಪೊಲೀಸ್ ಇಲಾಖೆಗೆ ಸೇರ್ಪಡೆಯಾಗುವುದು ಪುಣ್ಯದ ಕಾರ್ಯವಾಗಿದೆ ಎಂದು ಹೇಳಿದರು.

ಪ್ರಸ್ತುತ ದಿನಗಳಲ್ಲಿ ಸೈಬರ್ ವಂಚನೆ ಪ್ರಕರಣಗಳು ಹೆಚ್ಚಳವಾಗುತ್ತಿದ್ದು, ಪೊಲೀಸ್ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಯು ಜಾಣ್ಮೆ ಹಾಗೂ ತಂತ್ರಜ್ಞಾನದ ನೆರವಿನ ಮೂಲಕ ಸೈಬರ್ ಅಪರಾಧ ತಡೆಗಟ್ಟಬೇಕು ಹಾಗೂ ಈ ಕುರಿತು ನಾಗರೀಕರಿಗೆ ಅರಿವು ಮೂಡಿಸುವ ಕಾರ್ಯವಾಗಬೇಕು ಎಂದು ಹೇಳಿದರು.ನಾಡಿನ ಆಸ್ತಿಯಾಗಿರುವ ಪೊಲೀಸರು ಉತ್ತಮ ಆರೋಗ್ಯ, ಹವ್ಯಾಸಗಳನ್ನು ರೂಪಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು. ಜಿಲ್ಲಾ ಪೊಲೀಸ್ ಅಧೀಕ್ಷಕ ರಂಜಿತ್ ಕುಮಾರ್ ಬಂಡಾರು ಮಾತನಾಡಿ, ಪೊಲೀಸ್ ಕಲ್ಯಾಣ ಕಾರ್ಯಕ್ರಮಗಳ ಮೂಲಕ ಪೊಲೀಸರ ಜೀವನಮಟ್ಟವನ್ನು ಸುಧಾರಿಸುವ ಅವಶ್ಯಕತೆ ಬಗ್ಗೆ ಹೆಚ್ಚಿನ ಗಮನಹರಿಸಬೇಕಾಗಿದೆ. ಈ ಉದ್ದೇಶಕ್ಕಾಗಿ ನಿವೃತ್ತರಾಗಿರುವ ಹಾಗೂ ಸೇವೆಯಲ್ಲಿರುವ ಪೊಲೀಸ್ ಅಧಿಕಾರಿ ಹಾಗೂ ಸಿಬ್ಬಂದಿಗಳ ಹಿತಚಿಂತನೆ ಮತ್ತು ಕ್ಷೇಮಾಭಿವೃದ್ಧಿಗಾಗಿ ನಿವೃತ್ತ ಪೊಲೀಸ್ ಅಧಿಕಾರಿಗಳ ಕಲ್ಯಾಣ ನಿಧಿ ಅಡಿಯಲ್ಲಿ ನಿಧಿ ಸಂಗ್ರಹಿಸಿ, ಈ ರೀತಿಯಾಗಿ ಕ್ರೂಢೀಕರಣಗೊಂಡ ಹಣದಲ್ಲಿ ವಿವಿಧ ರೀತಿಯ ಸಹಾಯ ಕಾರ್ಯಕ್ರಮಗಳನ್ನು ಕಾಲಕಾಲಕ್ಕೆ ಹಮ್ಮಿಕೊಂಡು ಬರಲಾಗುತ್ತಿದೆ. ಸೇವೆಯಲ್ಲಿರುವ ಪೊಲೀಸ್ ಸಿಬ್ಬಂದಿ ವರ್ಗ ಹಾಗೂ ಅವರ ಕುಟುಂಬ ವರ್ಗದವರ ಸಲುವಾಗಿ ಚಿತ್ರದುರ್ಗ ಜಿಲ್ಲಾ ಪೊಲೀಸ್ ಕಲ್ಯಾಣ ನಿಧಿಯಿಂದ ಈಗಾಗಲೇ ಅನೇಕ ವೈವಿಧ್ಯಮಯ ಕಾರ್ಯಕ್ರಮಗಳನ್ನೂ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ನಿವೃತ್ತ ಪೊಲೀಸ್ ಅಧಿಕಾರಿ, ಸಿಬ್ಬಂದಿಗೆ ಸನ್ಮಾನ: 2024ರ ಏಪ್ರಿಲ್ 01 ರಿಂದ 2025ರ ಮಾರ್ಚ್ 31 ರವರೆಗೆ ನಿವೃತ್ತಿ ಹೊಂದಿದ ಪೊಲೀಸ್ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದವರನ್ನು ಇದೇ ಸಂದರ್ಭದಲ್ಲಿ ಸನ್ಮಾನಿಸಲಾಯಿತು. ಸನ್ಮಾನಿತರ ವಿವರ ಇಂತಿದೆ. ಎಎಸ್‌ಐಗಳಾದ ಧರಣೇಶಪ್ಪ, ಸಿ.ಅಜ್ಜಣ್ಣ, ಟಿ.ಉಮಾಶಂಕರ್, ಸಣ್ಣಬೋರಯ್ಯ, ಪಿ.ಮಂಜುನಾಥ, ಟಿ.ಕೃಷ್ಣಮೂರ್ತಿ, ಎನ್.ತಿಪ್ಪೇಸ್ವಾಮಿ, ಕೆ.ಬಿ.ಮಂಜುನಾಥ್, ರುದ್ರಪ್ಪ, ಹೆಚ್.ಗಣಪತಿ, ಟಿ.ರೇವಣಸಿದ್ದಪ್ಪ, ಎನ್.ಪ್ರಕಾಶ್, ಎಸ್.ಡಿ.ವಸಂತ್ ಕುಮಾರ್, ರಾಮಚಂದ್ರರೆಡ್ಡಿ, ಎಆರ್‌ಎಸ್‌ಐ ಪಿ.ಕಾಟಯ್ಯ, ಡಿ.ಮಂಜುನಾಥ, ಪಿಎಸ್‌ಐಗಳಾದ ಕೆ.ಪ್ರಾಣೇಶ್, ಎಲ್.ಆರ್.ಸಂಜಯ್, ಸಿಹೆಚ್‌ಸಿ ಎಂ.ಕೆ. ವೆಂಕಟೇಶ್ ರೆಡ್ಡಿ, ಸಿಪಿಸಿಗಳಾದ ಈಶ್ವರಪ್ಪ, ಬಿ.ಬಸವರಾಜು ಹಾಗೂ ಪಿಎಸ್‌ಐ ಹೆಚ್.ಆರ್.ಜ್ಞಾನಮೂರ್ತಿ ಸೇರಿದಂತೆ ಒಟ್ಟು 22 ಮಂದಿ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿ ವರ್ಗದವರನ್ನು ಸನ್ಮಾನಿಸಿ, ಗೌರವಿಸಲಾಯಿತು.ಕರ್ನಾಟಕ ರಾಜ್ಯ ಪೊಲೀಸ್ ಧ್ವಜ ಹಾಗೂ ಕಲ್ಯಾಣ ದಿನಾಚರಣೆ ಅಂಗವಾಗಿ ಪರೇಡ್ ಕಮಾಂಡರ್ ಆರ್‌ಪಿಐ ಶಿವರಾಜ್ ನೇತೃತ್ವದಲ್ಲಿ ಆಕರ್ಷಕ ಪಥ ಸಂಚಲನ ನಡೆಯಿತು.ಕಾರ್ಯಕ್ರಮದಲ್ಲಿ ಚಿತ್ರದುರ್ಗ ಉಪವಿಭಾಗ ಡಿವೈಎಸ್‌ಪಿ ದಿನಕರ್, ಚಳ್ಳಕೆರೆ ಡಿವೈಎಸ್‌ಪಿ ರಾಜಣ್ಣ, ಜಿಲ್ಲಾ ಕಾರಾಗೃಹ ಅಧೀಕ್ಷಕ ಸಿದ್ದರಾಮ ಪಾಟೀಲ್, ನಿವೃತ್ತ ಪೊಲೀಸ್ ನೌಕರರ ಸಂಘದ ಅಧ್ಯಕ್ಷ ಭೀಮಾರೆಡ್ಡಿ ಇದ್ದರು.

---

# ಸರ್ವಶ್ರೇಷ್ಠ ವಚನಕಾರ ದೇವರದಾಸಿಮಯ್ಯನವರ ಆದರ್ಶಗಳ ಪಾಲನೆಗೆ ಮುಂದಾಗಿ: ರಘುಮೂರ್ತಿ

» ಚಳ್ಳಕೆರೆ



12ನೇ ಶತಮಾನವನ್ನು ವಚನಗಳ ಕಾಲಮಾನವಾಗಿದೆ. ಜಗಜ್ಯೋತಿ ಬಸವೇಶ್ವರರೂ ಸೇರಿದಂತೆ ಅನೇಕ ಮಹನೀಯರು ತಮ್ಮದೇಯಾದ ವಚನಗಳ ಮೂಲಕ ಸಮಾಜದ ಪರಿವರ್ತನೆಗೆ ಕಾರಣಕರ್ತರಾಗಿದ್ದಾರೆ. ಪ್ರತಿಯೊಂದು ವಚನದಲ್ಲೂ ಬದುಕಿನ ನೆಲೆಯನ್ನು ಕಂಡುಕೊಳ್ಳಬಹುದಾದ ಅರ್ಥವಿದೆ. ಇಂತಹ ಮಹಾನ್ ವಚನಕಾರರ ಸಾಲಿನಲ್ಲಿ ದೇವರದಾಸಿಮಯ್ಯ ಅಗ್ರಹಣ್ಯರು ಎಂದು ಕ್ಷೇತ್ರದ ಶಾಸಕ, ರಾಜ್ಯಸಣ್ಣಕೈಗಾರಿಕೆ ಅಭಿವೃದ್ಧಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ಬುಧವಾರ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ತಾಲ್ಲೂಕು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಹಾಗೂ ನೇಕಾರ ಸಮುದಾಯದ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ರಾಜ್ಯ ಸರ್ಕಾರ ಇಂತಹ ಮಹಾನೀಯರ ಕೊಡುಗೆಗಳನ್ನು ನಿರಂತರ ನೆನಪಿಸಿಕೊಳ್ಳುವ ದೃಷ್ಠಿಯಿಂದ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿಯಿಂದ ಆಚರಣೆ ಮಾಡಲಾಗುತ್ತಿದೆ. ಈಗಾಗಲೇ 44 ವಿವಿಧ ಸಮುದಾಯದ ಮಹಾನೀಯರ ಜಯಂತಿ ಆಚರಿಸಲಾಗುತ್ತಿದೆ ಎಂದರು. ಪ್ರಾಸ್ತಾವಿಕವಾಗಿ ಮಾತನಾಡಿದ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಎಚ್.ಶಶಿಧರ, ದೇವರದಾಸಿಮಯ್ಯರೂ ಸೇರಿದಂತೆ ಅನೇಕ ಮಹಾನೀಯರು ಸಮಾಜದಲ್ಲಿ ಭದ್ರವಾಗಿ ನೆಲೆಯೂರಿ ತಮ್ಮದೇಯಾದ ವಿಚಾರಧಾರೆಗಳನ್ನು ಎಲ್ಲರೊಂದಿಗೆ ಹಂಚಿಕೊಂಡಿದ್ದಾರೆ. ನಾವೆಲ್ಲರೂ ಅವರ ಆದರ್ಶಗಳ ಪಾಲನೆಗೆ ಮುಂದಾಗೋಣವೆಂದರು.


ಪುಟ 2


# ಜಮೀನಿಗೆ ಬೆಂಕಿ ಬಿದ್ದ ಪ್ರಕರಣ: ಪರಸ್ಪರ ಕಲ್ಲು, ದೊಣ್ಣೆಯಿಂದ ಹೊಡೆದಾಡಿಕೊಂಡ ಸಂಬಂಧಿಗಳು

» ಚಳ್ಳಕೆರೆ





ತಾಲ್ಲೂಕಿನ ಯಲಗಟ್ಟೆ ಗ್ರಾಮದಲ್ಲಿ ಜಮೀನಿನ ಬದುವಿಗೆ ಬೆಂಕಿಹಾಕಿದ ವಿಚಾರಕ್ಕೆ ಸಂಬಂಧಿಸಿದಂತೆ ಎರಡು ಗುಂಪುಗಳ ಮಧ್ಯೆ ಮಾರಾಮಾರಿ ನಡೆದು ಒಟ್ಟು 9 ಜನರು ಗಾಯಗೊಂಡು ಜಿಲ್ಲಾ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಯಲಗಟ್ಟೆ ಗ್ರಾಮದ ನೇತ್ರಾವತಿ ಪೊಲೀಸರಿಗೆ ನೀಡಿದ ದೂರಿನಲ್ಲಿ ನಮ್ಮ ಜಮೀನಿನ ಬದುವಿಗೆ ಬೆಂಕಿ ಇಟ್ಟ ವಿಚಾರದಲ್ಲಿ ನಮ್ಮ ಮನೆಯ ಮುಂದೆ ಬಂದು ವಿರೂಪಾಕ್ಷಪ್ಪ, ಆತನ ಹೆಂಡತಿ ಸವಿತಾ, ಲಕ್ಷ್ಮಿದೇವಿ, ಚಂದ್ರಣ್ಣ, ಸುದೀಪ, ಉಮೇಶ್ ಎಲ್ಲರೂ ಸೇರಿ ಚನ್ನವೀರಪ್ಪ, ಪಿರ್ಯಾದಿ ನೇತ್ರಾವತಿ ಹಾಗೂ ಚೆಲುಮಕ್ಕ ಎಂಬುವವರಿಗೆ ಕಲ್ಲು, ಇಟ್ಟಿಗೆ , ದೊಣ್ಣೆಯಿಂದ ಹೊಡೆದು ಗಾಯಗೊಳಿಸಿದ್ದಲ್ಲದೆ, ನಿಮ್ಮನ್ನು ಸಾಯಿಸದೇ ಬಿಡುವುದಿಲ್ಲವೆಂದು ಬೆದರಿಕೆ ಹಾಕಿದ ಬಗ್ಗೆ ದೂರು ನೀಡಿರುತ್ತಾರೆ. ಠಾಣಾಧಿಕಾರಿ ರಂಗನಾಥ ಪ್ರಕರಣ ದಾಖಲಿಸಿದ್ದಾರೆ.


ಪುಟ 2


---

## ಪ್ರಮುಖ ಸುದ್ದಿ

ಮತ್ತೋಡು ಗ್ರಾಮದಲ್ಲಿ ಮಂಗಳವಾರ ರಾತ್ರಿ ಘಟನೆ; ನಾಲ್ವರು ಆರೋಪಿಗಳ ಬಂಧನ

# ಗುಟ್ಕಾ ವಿಚಾರವಾಗಿ ಆರಂಭವಾದ ಜಗಳ, ಕೊಲೆಯಲ್ಲಿ ಅಂತ್ಯ

» ಹೊಸದುರ್ಗ



ಗುಟ್ಕಾ ವಿಚಾರವಾಗಿ ಆರಂಭವಾದ ಜಗಳದಲ್ಲಿ ವ್ಯಕ್ತಿಯೊಬ್ಬನನ್ನು ಕೊಲೆ ಮಾಡಿರುವ ಘಟನೆ ತಾಲೂಕಿನ ಮತ್ತೋಡು ಗ್ರಾಮದಲ್ಲಿ ಮಂಗಳವಾರ ರಾತ್ರಿ ನಡೆದಿದ್ದು, ಮೃತ ವ್ಯಕ್ತಿಯನ್ನು ಮತ್ತೋಡು ಗ್ರಾಮದ ಸೋಮಶೇಖರ (25) ಎಂದು ಗುರುತಿಸಲಾಗಿದೆ.

ಘಟನೆ; ಮೃತ ಸೋಮಶೇಖರನ ತಮ್ಮ ನಾಗರಾಜ ಎಂಬುವವರು ಗ್ರಾಮದ ಮಂಜುನಾಥನ ಅಂಗಡಿಗೆ ಸೂಪರ್ ತರಲು ಹೋದಾಗ, ಅಂಗಡಿಯ ಮಾಲೀಕ ಮಂಜುನಾಥ ಫೋನ್ ಪೇ ಇಲ್ಲ ಕ್ಯಾಶ್ ಕೊಡು ಎಂದು ಕೇಳಿದ್ದಾನೆ. ಈ ವಿಚಾರವಾಗಿ ರಘು ಎಂಬುವನು ನಾಗರಾಜನ ಮೇಲೆ ಹಲ್ಲೆ ಮಾಡಲು ಮುಂದಾಗಿದ್ದಾನೆ. ಇದನ್ನು ವಿಚಾರಿಸಲು ಹೋದ ಸೋಮಶೇಖರನ ಮೇಲೆ ರಘು, ಮಂಜುನಾಥ, ಶಶಿಕುಮಾರ ಹಾಗೂ ಗವಿರಂಗನಾಥ ಸೇರಿಕೊಂಡು ಹಲ್ಲೆ ಮಾಡಿದ್ದಾರೆ. ಹಲ್ಲೆಯಿಂದ ಕುಸಿದು ಬಿದ್ದ ಸೋಮಶೇಖರನನ್ನು ಮತ್ತೋಡು ಸರ್ಕಾರಿ ಆಸ್ಪತ್ರೆಗೆ ಚಿಕಿತ್ಸೆಗೆಂದು ಕರೆದೊಯ್ಯಲಾಗಿದೆ. ಪರೀಕ್ಷಿಸಿದ ವೈದ್ಯರು ಹೆಚ್ಚಿನ ಚಿಕಿತ್ಸೆಗಾಗಿ ಹೊಸದುರ್ಗ ಸರ್ಕಾರಿ ಆಸ್ಪತ್ರೆಗೆ ಕರೆದುಕೊಂಡು ಹೋಗುವಂತೆ ಸೂಚಿಸಿದ್ದಾರೆ.ಅದರಂತೆಯೇ, ಗಾಯಾಳವನ್ನುಸಂಬಂಧಿಕರು ಹೊಸದುರ್ಗ ಸರ್ಕಾರಿ ಆಸ್ಪತ್ರೆಗೆ ಕರೆದೊಯ್ಯಿದಿದ್ದಾರೆ. ಗಾಯಾಳವನ್ನ ಪರೀಕ್ಷಿಸಿದ ವೈದ್ಯರು ಮೃತಪಟ್ಟಿರುವುದಾಗಿ ತಿಳಿಸಿದ್ದಾರೆ. ಈ ಘಟನೆ ಸಂಬಂಧ ಶ್ರೀರಾಂಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

**ಪೊಲೀಸ್ ಎಂದು ತಿರುಗುತ್ತಿದ್ದ ಆರೋಪಿ:** ಮೃತ ಸೋಮಶೇಖರನ ಕೊಲೆಗೆ ಸಂಬಂಧಪಟ್ಟಂತೆ ಬಂಧನವಾಗಿ, ಜೈಲು ಸೇರಿರುವ ಎ1 ಆರೋಪಿ ರಘು, ಕಳೆದ 3 ವರ್ಷಗಳಿಂದ ನಾನು ಪೊಲೀಸ್ ಹುದ್ದೆಯಲ್ಲಿದ್ದೇನೆಂದು ಗ್ರಾಮದಲ್ಲಿ ಹೇಳಿಕೊಂಡು ತಿರುಗಿದ್ದಾನೆ. ಅಲ್ಲದೇ ಇತನು ಬೈಕ್ ಮೇಲೆ ಪೊಲೀಸ್ ಎಂದು ಸ್ಟಿಕ್ಕರ್ ಹಾಕಿಸಿಕೊಂಡಿದ್ದಾನೆ. ಈತನ ಮಾತು ಮತ್ತು ವರ್ತನೆ ಕಂಡ ಊರಿನ ಜನರು, ಪೊಲೀಸ್ ಇಲಾಖೆಯಲ್ಲಿ ಇರಬಹುದೇನೋ ಎಂದು ನಂಬಿದ್ದಾರೆ. ಘಟನೆಯಲ್ಲಿ ಭಾಗಿಯಾಗಿ ಅರೆಸ್ಟ್ ಆದ ಬಳಿಕವೇ, ಈತನು ನಕಲಿ ಪೊಲೀಸ್ ಎಂಬ ಸತ್ಯ ಬಯಲಿಗೆ ಬಂದಿದೆ. ಈ ಬಗ್ಗೆ ಪ್ರತಿಕ್ರಿಯಿಸಿದ ಶ್ರೀರಾಂಪುರ ಪೊಲೀಸ್ ಠಾಣೆ ಇನ್ಸ್ಪೆಕ್ಟರ್ ಮಧು, ಆರೋಪಿ ರಘು ಬೈಕ್ ಮೇಲೆ ಪೊಲೀಸ್ ಎಂದು ಹಾಕಿಕೊಂಡು ತಿರುಗಾಡುತ್ತಿದ್ದ ವಿಷಯ ನಮ್ಮ ಗಮನಕ್ಕೆ ಬಂದಿರಲಿಲ್ಲ. ಆತ ಪೊಲೀಸ್ ಇಲಾಖೆಯಲ್ಲಿ ಇಲ್ಲವೆಂದು ಸ್ಪಷ್ಟನೆ ನೀಡಿದ್ದಾರೆ.

## ಫಾಸ್ಟ್ ನ್ಯೂಸ್

### ಸರ್ವಶ್ರೇಷ್ಠ ವಚನಕಾರ ದೇವರದಾಸಿಮಯ್ಯನವರ ಆದರ್ಶಗಳ ಪಾಲನೆಗೆ ಮುಂದಾಗಿ: ರಘುಮೂರ್ತಿ

» ಮೊದಲ ಪುಟದಿಂದ

ದೇವರದಾಸಿಮಯ್ಯನವರ ಸಾಧನೆ ಮತ್ತು ಕೊಡುಗೆಗಳ ಬಗ್ಗೆ ಉಪನ್ಯಾಸಕ ಚಂದ್ರಶೇಖರ್ ವಿವರಿಸಿದರು. ನಗರಸಭೆ ಅಧ್ಯಕ್ಷೆ ಮಂಜುಳಾಪ್ರಸನ್ನಕುಮಾರ್, ಉಪಾಧ್ಯಕ್ಷೆ ಸುಮ, ಸ್ಥಾಯಿ ಸಮಿತಿ ಅಧ್ಯಕ್ಷ ಟಿ.ಮಲ್ಲಿಕಾರ್ಜುನ್, ಸದಸ್ಯರಾದ ಬಿ.ಟಿ.ರಮೇಶ್ಗೌಡ, ಕೆ.ವೀರಭದ್ರಪ್ಪ, ಪರಶುರಾಮಪುರ ಬ್ಲಾಕ್ಕಾಂಗ್ರೆಸ್ ಅಧ್ಯಕ್ಷ ಜಿ.ಟಿ.ಶಶಿಧರ, ಸಮಾಜದ ಅಧ್ಯಕ್ಷ ರವಿಕುಮಾರ್, ಶಿರಸ್ತೇದಾರ್ ಸದಾಶಿವಪ್ಪ, ಗಿರೀಶ್, ಜಿಲ್ಲಾಪಂಚಾಯಿತಿ ಕೆಡಿಪಿ ಸದಸ್ಯ ಓ.ರಂಗಸ್ವಾಮಿ, ಪಶು ಅಧಿಕಾರಿ ಡಾ.ರೇವಣ್ಣ, ತೋಟಗಾರಿಕೆ ಅಧಿಕಾರಿ ವಿರೂಪಾಕ್ಷಪ್ಪ, ಪೌರಾಯುಕ್ತ ಜಗರೆಡ್ಡಿ, ನಿವೃತ್ತ ಪ್ರಾಂಶುಪಾಲ ಶಿವಲಿಂಗಪ್ಪ, ಜನಾಂಗದ ಮುಖಂಡರಾದ ಪೀತಾಂಬರ, ಜೈರಾಂ, ಮೇಡಂಶಿವಮೂರ್ತಿ, ಸತ್ಯನಾರಾಯಣ, ವೆಂಕಟೇಶ್ ಮುಂತಾದವರು ಉಪಸ್ಥಿತರಿದ್ದರು.

### ವೀರಭದ್ರ ದೇವರ ಗುಗ್ಗಳ



» ಚಿತ್ರದುರ್ಗ

ನಗರದಹೊಳಲ್ಕೆರೆರಸ್ತೆಯಶ್ರೀನೀಲಕಂಠೇಶ್ವರಸ್ವಾಮಿ ದೇವಸ್ಥಾನದಲ್ಲಿನ ವೀರಶೈವ ಸಮಾಜ (ರಿ.) ದವತಿಯಿಂದ ಏ.12ನೇ ಶನಿವಾರ ಬೆಳಗ್ಗೆ 6.30 ರಿಂದ ಹರಪನಹಳ್ಳಿ ಪಟ್ಟಣದ ಮೇಗಳಪೇಟೆ ಶ್ರೀ ಗುಗ್ಗಳ ವೀರಭದ್ರೇಶ್ವರ ದೇವಸ್ಥಾನ ಸಮಿತಿ ಇವರಿಂದ ಶ್ರೀ ವೀರಭದ್ರ ದೇವರ ಗುಗ್ಗಳ ಮತ್ತು ಅಗ್ನಿಕುಂಡ ಶ್ರೀ ನೀಲಕಂಠೇಶ್ವರ ಸ್ವಾಮಿ ದೇವಸ್ಥಾನದಲ್ಲಿ ಏರ್ಪಡಿಸಲಾಗಿದೆ. ಬೆಳಗ್ಗೆ 7.00 ಗಂಟೆಗೆ ಗಂಗಾಪೂಜೆಯ ನಂತರ ಗುಗ್ಗಳದ ಮೆರವಣಿಗೆಯು ಉಜ್ಜಯಿನಿ ಮಠದಿಂದ ಹೊರಟು ರಂಗಯ್ಯನಬಾಗಿಲು, ದೊಡ್ಡಪೇಟೆ, ಚಿಕ್ಕಪೇಟೆ, ಆನೆಬಾಗಿಲು, ಮಹಾತ್ಮಗಾಂಧಿ ವೃತ್ತದ ಮುಖಾಂತರವಾಗಿ ಶ್ರೀ ನೀಲಕಂಠೇಶ್ವರಸ್ವಾಮಿ ದೇವಸ್ಥಾನದ ಮುಂಭಾಗದ ಅಗ್ನಿಕುಂಡ ಹಾಯುವುದರ ಮೂಲಕ ಬಿಜಯಂಗೈಯುವುದು. ಮಹಾಮಂಗಳಾರತಿ ನಂತರ ದಾಸೋಹ ಏರ್ಪಡಿಸಲಾಗಿದೆ. ಗುಗ್ಗಳ ಮೆರವಣಿಗೆ ಬರುವ ದಾರಿಯಲ್ಲಿ ಬರುವಾಗ ಭಕ್ತರು ಮನೆಗಳ ಮುಂದೆ ನೀರನ್ನು ಹಾಕಿ ಸಹಕರಿಸಿ ಶ್ರೀ ವೀರಭದ್ರಸ್ವಾಮಿ ಮನೆ ದೇವರ ಮನೆತನದವರು, ಕಡ್ಡಾಯವಾಗಿ ಗುಗ್ಗಳದಲ್ಲಿ ಭಾಗವಹಿಸಿ ಎಂದು ಸಮಾಜದವತಿಯಿಂದ ಮನವಿ ಮಾಡಲಾಗಿದ್ದು, ಸಮಾಜ ಸದಸ್ಯತ್ವ ಪಡೆಯಿರಿ, ಸಮಾಜದ ಎಲ್ಲಾ ಕಾರ್ಯಕ್ರಮಗಳಲ್ಲಿಪಾಲ್ಗೊಂಡುಸಂಘಟನೆಗೆಒತ್ತು ನೀಡಲು ಕೋರಲಾಗಿದ್ದು, ಈ ಕಾರ್ಯಕ್ರಮದಲ್ಲಿ ಭಕ್ತಾಧಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಶ್ರೀ ಸ್ವಾಮಿಯ ಕೃಪೆಗೆ ಪಾತ್ರರಾಗಬೇಕಾಗಿ ವಿನಂತಿಸಲಾಗಿದೆ.

### ಪರಸ್ಪರ ದೊಣ್ಣೆಯಿಂದ ಹೊಡೆದಾಡಿಕೊಂಡ ಸಂಬಂಧಿಗಳು

» ಮೊದಲ ಪುಟದಿಂದ

ಇದಕ್ಕೆ ಪ್ರತಿಯಾಗಿ ಅದೇ ಗ್ರಾಮದಸವಿತಾ(29) ಎಂಬ ಗೃಹಿಣಿ ದೂರು ನೀಡಿದ್ದು, ಜಮೀನಿಗೆ ಬೆಂಕಿ ಬಿದ್ದ ವಿಷಯಕ್ಕೆ ಸಂಬಂಧಿಸಿದಂತೆ ವಿನಾಕಾರಣ ನಮ್ಮ ಮೇಲೆ ಏಕಾಏಕಿ ಚನ್ನವೀರಪ್ಪ, ಈಶ್ವರಪ್ಪ, ನೇತ್ರಮ್ಮ, ಚಲುಮಕ್ಕ ಹಲ್ಲೆ ನಡೆಸಿದ್ದಾರೆ. ಕಾನೂನು ಕ್ರಮ ಕೈಗೊಳ್ಳುವಂತೆ ದೂರು ನೀಡಿದ್ದಾರೆ. ಎರಡೂ ಗುಂಪುಗಳು ಪರಸ್ಪರ ಸಂಬಂಧಿಕರಾಗಿದ್ದಾರೆ. ಎರಡೂ ಪ್ರಕರಣ ದಾಖಲಿಸಿದ ಪೊಲೀಸರು ತನಿಖೆ ಮುಂದುವರೆಸಿದ್ದಾರೆ.

### ಎಸ್ಸೆಸ್ಸೆಲ್ಸಿ ಪರೀಕ್ಷೆ : 4934 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರು. 172 ಗೈರು.

» ಚಳ್ಳಕೆರೆ

ತಾಲ್ಲೂಕಿನಾದ್ಯಂತ ಎಸ್ಸೆಸ್ಸೆಲ್ಸಿ ಪರೀಕ್ಷೆಗಳು ಸುಗಮವಾಗಿ ನಡೆದಿದ್ದು, ಬುಧವಾರ ನಡೆದ ವಿಜ್ಞಾನ ಪರೀಕ್ಷೆಯಲ್ಲಿ 5106 ವಿದ್ಯಾರ್ಥಿಗಳ ಪೈಕಿ 4934 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿ 172 ವಿದ್ಯಾರ್ಥಿಗಳು ಗೈರು ಹಾಜರಾಗಿದ್ದರು ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ತಿಳಿಸಿದ್ದಾರೆ. ಅವರು, ಈ ಬಗ್ಗೆ ಮಾಹಿತಿ ನೀಡಿ, ಪ್ರಸ್ತುತ ವರ್ಷದ ಎಸ್ಸೆಸ್ಸೆಲ್ಸಿ ಪರೀಕ್ಷೆಯ ಎಲ್ಲಾ ವಿಷಯಗಳ ಪರೀಕ್ಷೆ ಯಾವುದೇ ಲೋಪವಿಲ್ಲದೆ ಶಿಸ್ತು ಬದ್ದವಾಗಿ ನಡೆದಿದೆ. ಎಸ್ಸೆಸ್ಸೆಲ್ಸಿ ಪರೀಕ್ಷಾ ಮಂಡಳಿ ವಿವಿಧ ತಂಡ ರಚಿಸಿ ಪರೀಕ್ಷೆ ಮೇಲ್ವಿಚಾರಣೆ ಕಾರ್ಯಕ್ಕೆ ನೇಮಿಸಿದ್ದಲ್ಲದೆ, ಪರೀಕ್ಷಾ ಕೇಂದ್ರಗಳಿಗೂ ಭೇಟಿ ನೀಡಿ ಅಕ್ರಮ ನಡೆಯದಂತೆ ಎಚ್ಚರಿಕೆ ವಹಿಸಿದ್ದಾರೆ.

# ವಚನ ಸಾಹಿತ್ಯಕ್ಕೆ ದಾಸಿಮಯ್ಯ ಮುನ್ನುಡಿ: ಎಡಿಸಿ

» ಚಿತ್ರದುರ್ಗ

ಹತ್ತನೇ ಶತಮಾನದಲ್ಲಿ ಸಂಸ್ಕೃತ ಹಾಗೂ ಹಳೆಗನ್ನಡದ ಶಿಷ್ಠಭಾಷೆಯಲ್ಲಿ ಸಾಹಿತ್ಯ ರಚನೆ ಮಾಡಲಾಗುತ್ತಿತ್ತು. ಇದು ಕೇವಲ ಪಂಡಿತರಿಗೆ ಮಾತ್ರ ಅರ್ಥವಾಗುತ್ತಿತ್ತು. ಆದರೆ ಜನರ ಆಡುನುಡಿಯಾದ ಕನ್ನಡ ಭಾಷೆಯಲ್ಲಿ ವಚನಗಳನ್ನು ರಚಿಸುವ ಮೂಲಕ ದೇವರ ದಾಸಿಮಯ್ಯ ವಚನ ಸಾಹಿತ್ಯ ರಚನೆಗೆ ಮುನ್ನುಡಿ ಹಾಕಿಕೊಟ್ಟರು, ಹೀಗಾಗಿಯೇ ಅವರನ್ನು ಆದ್ಯವಚನಕಾರರು ಎಂದು ಕರೆಯಲಾಗುತ್ತದೆ ಎಂಬುದಾಗಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಸಹಯೋಗದಲ್ಲಿ ಬುಧವಾರ ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾದ ಆದ್ಯ ವಚನಕಾರ ದೇವರ ದಾಸಿಮಯ್ಯ ಜಯಂತಿ ಕಾರ್ಯಕ್ರಮದಲ್ಲಿ, ದೇವರ ದಾಸಿಮಯ್ಯ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು.



ಪಂಡಿತರ ಸಾಹಿತ್ಯವನ್ನು ಪಾಮರರ ಭಾಷೆಯಲ್ಲಿ ಹೇಳಿದವರು ದೇವರ ದಾಸಿಮಯ್ಯ ಎಂದರೆ ತಪ್ಪಾಗಲಾರದು. ನೇಕಾರ ವೃತ್ತಿ ಮಾಡುತ್ತಲೇ ವಚನಗಳನ್ನು ರಚಿಸಿದರು. ಸಮಾಜದ ಅಂಕು ಡೊಂಕು, ಕಂದಾಚಾರ, ಮೂಢನಂಬಿಕೆಗಳನ್ನು ತಿದ್ದಿದರು. ಭಕ್ತಿ, ಜ್ಞಾನ, ಅನ್ನ ದಾಸೋಹ ಎಂಬ ತ್ರಿವಿಧ ದಾಸೋಹಗಳನ್ನು ಮಾಡಿದರು. ಈ ಮೂಲಕ ಸಮಾಜ ಸೇವೆ ಕೈಗೊಂಡರು. ಇಂದು ಮಹಾನುಭಾವರನ್ನು ಒಂದು ಜಾತಿ ಸೀಮಿತ ಮಾಡುವ ಪ್ರವೃತ್ತಿ ಹೆಚ್ಚಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಬೇಸರ ವ್ಯಕ್ತಪಡಿಸಿದರು. ನೇಕಾರ ಸಮುದಾಯ ಸಂಖ್ಯೆಯಲ್ಲಿ ಕಡಿಮೆ ಇದ್ದರೂ, ಶ್ರಮಜೀವಿಗಳಾಗಿದ್ದಾರೆ. ಕಾಯಕದಲ್ಲಿಯೇ ತಮ್ಮ ಬದುಕನ್ನು ಕಟ್ಟಿಕೊಂಡಿದ್ದಾರೆ. ಆಧುನಿಕ ಯುಗದ ತಂತ್ರಜ್ಞಾನದಲ್ಲಿ ಕೈಮಗ್ಗಗಳು ಮೂಲೆ ಸೇರುವಂತಾಗಿವೆ. ನೇಕಾರರು ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಬೇಕು. ಸರ್ಕಾರ ನೇಕಾರರಿಗೆ ವಿವಿಧ ಕ್ಷೇತ್ರಗಳಲ್ಲಿ ಮೀಸಲಾತಿ ನೀಡಿದೆ, ಇದರ ಸದಪಯೋಗ ಪಡೆದುಕೊಳ್ಳಬೇಕು. ಮಕ್ಕಳು ಸ್ಪರ್ಧಾತ್ಮಕ ಜಗತ್ತಿನಲ್ಲಿ ಉತ್ತಮ ಸ್ಥಾನ ಗಳಿಸಲು ಅನುಕೂಲವಾಗುವಂತೆ ಕೌಶಲ್ಯ ತರಬೇತಿ ನೀಡಬೇಕು ಎಂದರು.

ಜಿಲ್ಲಾ ನೇಕಾರ ಒಕ್ಕೂಟ ಚಿತ್ರದುರ್ಗ ನಗರದಲ್ಲಿ ವಿದ್ಯಾರ್ಥಿ ನಿಲಯ, ನೇಕಾರಿಕೆ ಉದ್ದಿಮೆ ಕೈಗೊಳ್ಳಲು ನಿವೇಶನ ಹಾಗೂ ಯಾದಗಿರಿಯ ಮುದನೂರು ಗ್ರಾಮದಲ್ಲಿ ದೇವರದಾಸಿಮಯ್ಯ ಪ್ರಾಧಿಕಾರ ರಚನೆ ಬಗ್ಗೆ ಮಾಡಿದ ಮನವಿಯನ್ನು ಸರ್ಕಾರಕ್ಕೆ ಕಳುಹಿಸಿಕೊಡಲಾಗುವುದು. ನಗರದ ಒಂದು ರಸ್ತೆಗೆ ದೇವರ ದಾಸಿಮಯ್ಯ ಹೆಸರು ಇಡಲು ನಗರಸಭೆ ಸಾಮಾನ್ಯ ಸಭೆಯಲ್ಲಿ ಚರ್ಚಿಸಿ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ತಿಳಿಸಿದರು.

ದಾವಣಗೆರೆ ಸಿದ್ದಗಂಗಾ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕ ಸಂತೋಷ್ ಮಾತನಾಡಿ, ವಿಶ್ವ ಸಾಹಿತ್ಯಕ್ಕೆ ಕನ್ನಡದ ಶ್ರೇಷ್ಠ ಕೊಡುಗೆ ಎಂದರೆ ವಚನ ಸಾಹಿತ್ಯ, ಇಂತಹ ಸಾಹಿತ್ಯ ರಚನೆಗೆ ಮುನ್ನುಡಿ ಬರೆದವರು ದೇವರ ದಾಸಿಮಯ್ಯನವರಾಗಿದ್ದಾರೆ. ವಚನ ಸಾಹಿತ್ಯ ವೇದ ಉಪನಿಷತ್‌ಗಳ ಸಾರವಲ್ಲ. ಅಂದಿನ ಸಮಾಜದಲ್ಲಿನ ಮೂಢನಂಬಿಕೆ, ಕಂದಾಚಾರ, ಜಾತಿವ್ಯವಸ್ಥೆ ಹಾಗೂ ಮೇಲ್ವರ್ಗದ ಯಜಮಾನಿಕೆಯ ವಿರುದ್ಧ ಹುಟ್ಟಿಕೊಂಡ ದೇಸಿ ಸಾಹಿತ್ಯವಾಗಿದೆ. ಅರಮನೆಯ ರಾಜಮನೆತನಗಳಿಗೆ ಸೀಮಿತವಾಗಿದ್ದ, ಸಾಹಿತ್ಯ, ಸಂಸ್ಕೃತಿ ಹಾಗೂ ಉತ್ತಮ ಜೀವನ ಪದ್ಧತಿಯನ್ನು ಜನಸಾಮಾನ್ಯರಿಗೆ ವಚನ ಸಾಹಿತ್ಯ ದೊರಕಿಸಿತು.

ಆದ್ಯ ವಚನಕಾರರಾಗಿ ದೇವರ ದಾಸಿಮಯ್ಯ, ಬಸವಣ್ಣ, ಅಲ್ಲಮಪ್ರಭು, ಅಕ್ಕಮಹಾದೇವಿಗೆ ಪ್ರೇರಣೆಯಾಗಿದ್ದರು. ದೇವರ ಹಾಗೂ ಜೇಡರ ದಾಸಿಮಯ್ಯ ಬೇರೆ ಬೇರೆ ಎನ್ನುವ ಸಾಕಷ್ಟು ವಾದಗಳು ಸಾಹಿತ್ಯ ವಲಯದಲ್ಲಿ ಇದ್ದವು. ಆದರೆ ಬಹುತೇಕ ವಿದ್ವಾಂಸರು ದೇವರ ಹಾಗೂ ಜೇಡರ ದಾಸಿಮಯ್ಯ ಇಬ್ಬರು ಒಂದೇ ಎಂದು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ ಎಂದು ಹೇಳಲಾಗಿದೆ ಎಂದರು.

ಯಾದಗಿರಿ ಜಿಲ್ಲೆಯ ಸುರಪುರ ತಾಲ್ಲೂಕಿನ ಮುದನೂರಿನಲ್ಲಿ ರಾಮಯ್ಯ ಹಾಗೂ ಶಂಕರಿ ಎಂಬುವವರ ಪುತ್ರರಾಗಿ ದೇವರ ದಾಸಿಮಯ್ಯ ಜನಿಸಿದರು. ನೇಕಾರ ಕಾಯಕ ಮಾಡುತ್ತಾ ಶಿವಭಕ್ತರಾಗಿ ದೇವರ ದಾಸಿಮಯ್ಯ ತಮ್ಮ ನಡೆ ಹಾಗೂ ವ್ಯಕ್ತಿತ್ವವನ್ನು ರೂಪಿಸಿಕೊಂಡರು. ದೇವರ ದಾಸಿಮಯ್ಯವರ ಘನತೆ ಕುರಿತು ಬಸವಣ್ಣನವರು18ವಚನಗಳಲ್ಲಿತಿಳಿಸಿದ್ದಾರೆ. ದೇವರ ದಾಸಿಮಯ್ಯ 'ರಾಮನಾಥ' ಎಂಬ ಅಂಕಿತ ನಾಮದೊಂದಿಗೆ ವಚನಗಳನ್ನು ರಚಿಸಿದ್ದಾರೆ. ಇದುವರೆಗೂ ಅವರ 176ಕ್ಕೂ ವಚನಗಳು ಲಭ್ಯವಾಗಿವೆ ಎಂದರು.

ಜಿಲ್ಲಾ ನೇಕಾರರ ಒಕ್ಕೂಟದ ಅಧ್ಯಕ್ಷ ಎಂ. ಗೋವಿಂದಪ್ಪ ಮಾತನಾಡಿ ದೇವರ ದಾಸಿಮಯ್ಯನವರು 10ನೇ ಶತಮಾನಕ್ಕೆ ಸೇರಿದ ಶ್ರೇಷ್ಠ ವಚನಕಾರರಾಗಿದ್ದಾರೆ. ಸಮಾಜಕ್ಕೆ ಅಂಟಿಕೊಂಡ ಜಡತ್ವ ತೆಗೆದುಹಾಕಿ ಉತ್ತಮ ಸಮಾಜ ನಿರ್ಮಾಣ ಮಾಡುವುದರೊಂದಿಗೆ, ಮಹಿಳೆಯರ ಸ್ಥಾನಮಾನ ಹೆಚ್ಚಿಸುವಲ್ಲಿ ಶ್ರಮ ವಹಿಸಿದರು ಎಂದರು.

ಹೊಸದುರ್ಗದ ಶಬೀನಾ ಬಾನು ಅವರ ಕಲಾ ತಂಡ ಗೀತಗಾಯನ ಹಾಗೂ ನಾಡಗೀತೆಯನ್ನು ಪ್ರಸ್ತುತ ಪಡಿಸಿದರು. ಕೃಷಿ ಇಲಾಖೆ ಜಂಟಿ ನಿರ್ದೇಶಕ ಮಂಜುನಾಥ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಿ.ಎಂ.ಗುರುನಾಥ್, ಜಿಲ್ಲಾ ನೇಕಾರರ ಒಕ್ಕೂಟದ ಪ್ರಧಾನ ಕಾರ್ಯದರ್ಶಿ ಸುರೇಶ್, ಸೇರಿದಂತೆ ಮುಖಂಡರಾದ ಚಂದ್ರಶೇಖರ್, ನಾರಾಯಣ್, ಎನ್. ಆರ್.ಶಶಿಧರ್, ಹೊಂಬಕ್ಕ, ಶ್ರೀದೇವಿ, ರಘು, ಮಂಜುನಾಥ ಸೇರಿದಂತೆ ಮತ್ತಿರರು ಉಪಸ್ಥಿತರಿದ್ದರು.

# ಲಕ್ಷ್ಮೀಕೊಲ್ಲಾಪುರದಮ್ಮ ಅದ್ದೂರಿ ರಥೋತ್ಸವ




» ಪರಶುರಾಂಪುರ

ಗ್ರಾಮದ ಆರಾಧ್ಯ ದೇವತೆಯಾದ ಶ್ರೀ ಕೊಲ್ಲಾಪುರದಮ್ಮ ದೇವಿಯ ರಥೋತ್ಸವ ಬುಧವಾರ ಶ್ರದ್ಧಾ ಭಕ್ತಿಯಿಂದ ವಿಜೃಂಭಣೆಯಿಂದ ನೆರವೇರಿತು.ಭಕ್ತಾದಿಗಳು ರಥವನ್ನ ಎಳೆದು ಸಂಭ್ರಮಿಸಿದರು.

ರಥೋತ್ಸವದ ಅಂಗವಾಗಿ ದೇವಿಗೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳ ಬೆಳಗ್ಗೆಯಿಂದ ನೆರವೇರಿಸಲಾಯಿತು.ರಥೋತ್ಸವ ಅಂಗವಾಗಿ ರಥಾಂಗ ಹೋಮ ಬಳಿಕ ಪ್ರಾಕಾರೊತ್ಸವ ನಂತರ ಬಲಿ ಹಾಗೂ ಬಾನ ನೆರವೇರಿಸಲಾಯಿತು.

ರಥೋತ್ಸವದ ಅಂಗವಾಗಿ ವಿವಿಧ ಬಗೆಯ ಹೂವು, ಪುಟಗಳಿಂದ ಅಲಂಕೃತಗೊಳಿಸಲಾಗಿತ್ತು.ಈ ವೇಳೆಯಲ್ಲಿ ಭಕ್ತಾದಿಗಳು ತಮ್ಮ ಹರಕೆಯನ್ನ ತೀರಿಸಲು ವಿವಿಧ ಬಗೆಯ ದೊಡ್ಡ ದೊಡ್ಡ ಗಾತ್ರದ ಹೂವಿನ ಹಾರಗಳನ್ನು ವಿವಿಧ ಜನಪದ ವಾದ್ಯಗಳ ಮೆರವಣಿಗೆ ಮೂಲಕ ರಥೋತ್ಸವಕ್ಕೆ ಅರ್ಪಿಸಿದರು.ಈ ವೇಳೆಯಲ್ಲಿ ಕೆಡಿಪಿ ಮಾಜಿ ಸದಸ್ಯ ಜಯವೀರಚಾರಿ ಒಂದು ಲಕ್ಷದ ಒಂದು ರೂಪಾಯಿಗೆ ಮುಕ್ತಿ ಭಾವುಟದ ಹರಾಜಿನಲ್ಲಿ ಪಡೆದುಕೊಂಡರು.ಶಾಸಕ ಟಿ.ರಘುಮೂತಿ ಸೇರಿದಂತೆ ಗ್ರಾಮದ ಹಿರಿಯರು ರಥೋತ್ಸವಕ್ಕೆ ಚಾಲನೆ ನೀಡಿದರು.ಈ ವೇಳೆಯಲ್ಲಿ ಶಾಸಕ ಟಿ.ರಘುಮೂರ್ತಿ ಮಾತನಾಡಿ,ಇಂದಿಗೂ ಐತಿಹಾಸಿಕ ಹಿನ್ನೆಲೆ ಹೊಂದಿದ ಆಚರಣೆಗಳ ಜತೆ ಜನಪದ ಸಂಸ್ಕೃತಿ ನಡೆದುಕೊಂಡು ಬಂದ ಹಿನ್ನೆಲೆಯಲ್ಲಿ ಶ್ರದ್ಧಾ ಭಕ್ತಿಯು ಇಂದಿಗೂ ಕಾಣಬಹುದು ಎಂದರು.ಶಾಸಕ ಟಿ.ರಘುಮೂರ್ತಿ ಸೇರಿದಂತೆ ಗ್ರಾಪಂ ಅಧ್ಯಕ್ಷ ರುದ್ರೇಶ್, ದೇವಸ್ಥಾನ ಕಮಿಟಿ ಅಧ್ಯಕ್ಷ ಕಲ್ಲೇಶಣ್ಣ ಸೇರಿದಂತೆ ಗ್ರಾಪಂ, ಕಮಿಟಿ ಸದಸ್ಯರು, ಹಿರಿಯರು ಮುಖಂಡರು, ಗ್ರಾಮಸ್ಥರು ಉಪಸ್ಥಿತರಿದ್ದರು .

## ದೇವರ ಮೇಲಿನ ಅಪಾರವಾದ ಭಕ್ತಿ, ಶ್ರದ್ದೆ ನಮಗೆ ಉತ್ತಮ ಬದುಕನ್ನು ನೀಡುತ್ತದೆ: ಶಾಸಕ ಟಿ.ರಘುಮೂರ್ತಿ



» ಚಳ್ಳಕೆರೆ

ಇತ್ತೀಚಿನ ದಿನಗಳಲ್ಲಿ ದೇವರ ಮೇಲೆ ಅಪಾರವಾದ ಭಕ್ತಿ, ಶ್ರದ್ದೆ ಹೆಚ್ಚಾಗುತ್ತಿದೆ. ನಾವು ಮಾಡುವ ಧಾರ್ಮಿಕ ಕಾರ್ಯಕ್ರಮಗಳು ನಮಗೆ ಶ್ರೇಯಸ್ಸನ್ನು ಬಯಸುತ್ತವೆ. ನಮ್ಮೆಲ್ಲರ ಬದುಕು ಅರ್ಥಗರ್ಭಿತವಾಗಬೇಕಾದರೆ ದೇವರ ಕೃಪೆಬೇಕು. ಈ ನಿಟ್ಟಿನಲ್ಲಿ ಗ್ರಾಮದ ಜನರಿಗೆ ಸುಖ, ಶಾಂತಿ, ನೆಮ್ಮದಿ ನೀಡುವಂತೆ ಕರಿಯಮ್ಮದೇವಿಯನ್ನು ಪ್ರಾರ್ಥಿಸಿರುವುದಾಗಿ ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು. ಅವರು, ಬುಧವಾರ ಜಾಜೂರು ಗ್ರಾಮದಲ್ಲಿ ಕರಿಯಮ್ಮ ದೇವಿಯ ನೂತನ ಮಹಾದ್ವಾರದ ಉದ್ಘಾಟನಾ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡಿದರು. ಕಳೆದ ಹಲವಾರು ವರ್ಷಗಳಿಂದ ಸಾವಿರಾರು ರೈತರಿಗೆ ವೇದಾವತಿ ನದಿಯ ನೀರು ಹೆಚ್ಚು ಉಪಯೋಗವಾಗುತ್ತಿದೆ,ಸಾರ್ವಜನಿಕರಿಗೆ ಅಗತ್ಯವಿರುವ ಸೌಲಭ್ಯಗಳನ್ನು ನೀಡುವ ನಿಟ್ಟಿನಲ್ಲಿ ಸರ್ಕಾರ ಯಶಸ್ವಿಯಾಗಿದೆ ಎಂದರು.

ಗ್ರಾಮ ಪಂಚಾಯಿತಿ ಅಧ್ಯಕ್ಷ ಎಸ್.ಟಿ.ರಂಜನ್, ಉಪಾಧ್ಯಕ್ಷೆ ಪ್ರೇಮಕ್ಕ, ಸದಸ್ಯರಾದ ನರಸಿಂಹಪ್ಪ, ಹೇಮಂತ್ ಕುಮಾರ್, ರಂಗನಾಥ್, ಚಳ್ಳಕೆರೆ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಕೆ.ವೀರಭದ್ರಯ್ಯ, ಜಿ.ಟಿ.ಶಶಿಧರ, ಮುಖಂಡರಾದ ವೆಂಕಟೇಶ್, ಆರ್.ಚೆಲುಮಪ್ಪ, ವೀರಣ್ಣ, ಸಂಪತ್ ಕುಮಾರ್, ನಾಗರಾಜ್, ಚೆಲುಮೇಶ್, ಸುರೇಶ್, ಮಂಜುನಾಥ್, ರಂಗಪ್ಪ, ಪಿಡಿಒ ಓಬಣ್ಣ, ಮುಂತಾದವರು ಉಪಸ್ಥಿತರಿದ್ದರು.

## ಪ್ರಮುಖ ಸುದ್ದಿ

# ಚಿತ್ರದುರ್ಗದ ಈ ಉಜ್ಜಯಿನಿ ಪೀಠ ವಿದ್ವತ್ತಿನ ಪೀಠ: ಸ್ವಾಮೀಜಿ

» ಚಿತ್ರದುರ್ಗ

ಹಸಿದವರಿಗೆಅನ್ನ,ನೀರಡಿಕೆಯಾದವರಿಗೆ ನೀರು, ಬಿಸಿಲಿನಲ್ಲಿ ಬಳಲಿದವರಿಗೆ ನೆರಳನ್ನು ನೀಡುವುದು ನಿಜವಾದ ಧರ್ಮವಾಗಿದೆ ಇದು ನಮ್ಮನ್ನು ಮುಂದಿನ ದಿನದಲ್ಲಿ ಕಾಯುತ್ತದೆ ಎಂದು ಲಕ್ಷ್ಮೇಶ್ವರದ ಕರೇವಾಡಿ ಮಠದ ಶ್ರೀ ಮಳೆ ಮಲ್ಲಿಕಾರ್ಜನ ಶಿವಾಚಾರ್ಯ ಶ್ರೀಗಳು ತಿಳಿಸಿದರು.





ನಗರದರಂಗಯ್ಯನಬಾಗಿಲಬಳಿಯಿರುವ ಶ್ರೀ ಉಜ್ಜಯಿನಿ ಮಠದಲ್ಲಿ ಬುಧವಾರ ಹಮ್ಮಿಕೊಳ್ಳಲಾಗಿದ್ದ ಶ್ರೀಮದ್ ಉಜ್ಜಯಿನಿ ಸದ್ಧರ್ಮ ಸಿಂಹಾಸನಾಧೀಶ್ವರರಾದ ಲಿಂ॥ ಮರುಳಾರಾಧ್ಯ ಶಿವಾಚಾರ್ಯ ಮಹಾ ಭಗವತ್ಪಾದಕರ 30ನೇ ವರ್ಷದ ಪುಣ್ಯ ಸ್ಮರಣೋತ್ಸವ ಸಮಾರಂಭದ ಜನ ಜಾಗೃತಿ ಹಾಗೂ ಧರ್ಮ ಸಭಾ ಕಾರ್ಯಕ್ರಮವನ್ನು ಉದ್ಘಾಟಿಸಿ ಆರ್ಶೀವಚನ ನೀಡಿದ ಶ್ರೀಗಳು, ಇಂದಿನ ದಿನಮಾನದಲ್ಲಿ ಅನ್ನ, ನೀರು ನೆರಳನ್ನು ನೀಡುವುದು ರಸ್ತೆಯನ್ನು ಮಾಡುವುದು ಪುಣ್ಯದ ಕೆಲಸವಾಗಿದೆ. ಮರುಳಾಧ್ಯ ಶ್ರೀಗಳು ತಮ್ಮ ಜೀವನವನ್ನೇ ಈ ಮಠಕ್ಕೆ ಸವೆಸಿದ್ದಾರೆ. ಚಿಕ್ಕ ವಯಸ್ಸಿನಲ್ಲಿಯೇ ಪಟ್ಟಾಧಿಕಾರಿಗಳಾಗಿ ಉತ್ತಮವಾದ ಕಾರ್ಯವನ್ನು ಮಾಡಿದ್ದಾರೆ ಇಲ್ಲಿ ಕರಿ ಹಂಚಿನ ಮನೆಯಾಗಿತ್ತು ಇದನ್ನು ಒಂದು ಸುಸಜ್ಜಿತವಾದ ಕಲ್ಯಾಣ ಮಂಟಪವನ್ನಾಗಿ ಮಾಡಿದರು. ಇದ್ದಲ್ಲದೆ ವಿವಿಧ ಮಠಗಳಿಗೆ ಮರಿಯನ್ನು ನೀಡಿದರು, ಬಡ ಮಕ್ಕಳಿಗೆ ಉಚಿತವಾದ ಶಿಕ್ಷಣವನ್ನು ನೀಡುವಲ್ಲಿ ಶ್ರೀಗಳ ಪಾತ್ರ ಮಹತ್ವದಾಗಿದೆ ಎಂದರು.

ಸಮಾರಂಭದ ನೇತೃತ್ವವನ್ನು ವಹಿಸಿದ್ದ ಬೀದರ್ ಜಿಲ್ಲೆಯ ಎಣುಕಲ್ಲುಗಡ್ಡೆಯ ಶ್ರೀ ವೀರಭದ್ರ ಶ್ರೀಗಳು ಮಾತನಾಡಿ, ಚಿತ್ರದುರ್ಗ ಗಂಡು ಮೆಟ್ಟಿನ ನಾಡಾಗಿದೆ ಹೂರ ರಾಷ್ಟ್ರದಲ್ಲಿಯೂ ಸಹಾ ಇದಕ್ಕೆ ಹೆಸರಿದೆ. ಓನಕೆ ಓಬವ್ವ, ಮದಕರಿ ನಾಯಕ, ಸೇರಿದಂತೆ ವಿವಿಧ ಮಠಗಳಿವೆ ಇಲ್ಲಿನ ಉಜ್ಜಯಿನಿ ಮಠಕ್ಕೆ ಲಿಂಗೈಕ್ಯ ಶ್ರೀಗಳು ಇದರ ಉದ್ದಾರಕ್ಕಾಗಿ ತಮ್ಮ ಜೀವನವನ್ನೇ ಸವೆಸಿದರು. ತುಂಬ ಹಳೆಯದಾಗಿದ್ದ ಈ ಮಠವನ್ನು ಉನ್ನತ ಮಟ್ಟಕ್ಕ ತೆಗೆದುಕೊಂಡು ಹೋದರು, ಶಾಲೆಗಳನ್ನು ನಿರ್ಮಾಣ ಮಾಡುವುದರ ಮೂಲಕ ಮಕ್ಕಳಿಗೆ ಅಕ್ಷರ ದಾಸೋಹವನ್ನು ನೀಡಿದರು, ಹಾಸ್ಟಲ್‌ಗಳನ್ನು ನಿರ್ಮಾಣ ಮಾಡುವುದರ ಮೂಲಕ ಅನ್ನ ದಾಸೋಹ ನೀಡಿದರು. ಚಿತ್ರದುರ್ಗದಲ್ಲಿ ಅಂದಿನ ದಿನಮಾನದಲ್ಲಿಯೇ ಪಂಚಚಾರ್ಯ ಶ್ರೀಗಳು ಅಡ್ಡಪಲ್ಲಕ್ಕಿ ಮಹೋತ್ಸವವನ್ನು ಯಾವುದೇ ಅಡೇ ತಡೆ ಇಲ್ಲದೆ ಕಾರ್ಯವನ್ನು ಮಾಡಲಾಯಿತು. ಇದರ ಅಂಗವಾಗಿ ನಗರದಲ್ಲಿ ಪಂಚಚಾರ್ಯ ಕಲ್ಯಾಣ ಮಂಟಪವನ್ನು ನಿರ್ಮಾಣ ಮಾಡಲಾಯಿತು. ಇಂದಿನ ದಿನಮಾನದಲ್ಲಿ ನಮ್ಮ ಮಠಕ್ಕೆ ಮರಿಯನ್ನಾಗಿ ಮಾಡಲು ನಾವು ಮುಂದೆ ಬಂದಿದ್ದರೂ ಸಹಾ ಯಾರು ಸಹಾ ತಮ್ಮ ಮಕ್ಕಳನ್ನು ನೀಡುತ್ತಿಲ್ಲ, ಚಿತ್ರದುರ್ಗದ ಈ ಉಜ್ಜಯಿನಿ ಪೀಠ ವಿದ್ವತ್ತಿನ ಪೀಠವಾಗಿದೆ ಇಲ್ಲಿ ಅಭ್ಯಾಸವನ್ನು ಮಾಡಿದವರು ಈ ಉನ್ನತವಾದ ಸ್ಥಾನದಲ್ಲಿದ್ದಾರೆ, ಇದು ಭಕ್ತರ ಬೀಡಾಗಿದೆ, ಇಂದಿನ ದಿನಮಾನದಲ್ಲಿ ಮಠದಿಂದ ಘಟ ಬೇಳೆಯಬಾರದು ಘಟದಿಂದ ಮಠ ಬೆಳೆಯಬೇಕಿದೆ, ಆದರೆ ಇಂದಿನ ದಿನಮಾನದಲ್ಲಿ ಮಠದ ಆಸ್ತಿಯನ್ನು ನೋಡಿ ಮಠಕ್ಕೆ ಸ್ವಾಮಿಗಳಾಗುವವರಿದ್ದಾರೆ ಎಂದರು. ಈ ಸಮಾರಂಭದಲ್ಲಿ ಉಜ್ಜಯನಿ ಮಠದ ನಿಯೋಜಿತ ಉತ್ತರಾಧಿಕಾರಿಗಳಾದ ಅಭೀಷೇಕದೇವರು, ಜಂಗಮ ಸಮಾಜದ ಅಧ್ಯಕ್ಷರಾದ ಮಲ್ಲಿಕಾರ್ಜನಯ್ಯ, ನ್ಯಾಯವಾದಿಗಳಾದ ಕೆ.ಎನ್,ವಿಶ್ವನಾಥಯ್ಯ, ಉಜ್ಜಯಿನಿ ಮಠದ ಕಾರ್ಯದರ್ಶಿಗಳಾದ ಯು.ಎಂ.ಆರ್. ಈಶ್ವರ ಪ್ರಸಾದ್ ಭಾಗವಹಿಸಿದ್ದರು.

ಬೆಳಿಗ್ಗೆ ಬ್ರಾಹ್ಮೀ ಮಹೂರ್ತದಲ್ಲಿ ವಟುಗಳಿಗೆ ಲಿಂಗದೀಕ್ಷಾ (ಅಯ್ಯಚಾರ) ಕಾರ್ಯಕ್ರಮ ನಡೆದಿದ್ದು, ನಂತರ ಲಿಂ॥ ಜಗದ್ಗುರುಗಳ ಕರ್ತೃ ಗದ್ದುಗೆಗೆ ಹಾಗೂ ಶ್ರೀ ಮರುಳಸಿದ್ದೇಶ್ವರ ಸ್ವಾಮಿಗೆ ಮಹಾ ರುದ್ರಾಭೀಷೇಕ, ಸಹಸ್ರ ಬಿಲ್ವಾರ್ಚನೆ, ಮಹಾ ಮಂಗಳಾರತಿ ನಡೆಸಿ ನಂತರ 108 ಜನ ಮುತ್ತೈದೆಯರಿಗೆ ಉಡಿ ತುಂಬುವ ಕಾರ್ಯವನ್ನು ಡಾ.ವಿರೇಶ್ ಹೀರೇಮಠರವರು ನಡೆಸಿಕೊಟ್ಟರು.

ಇದೇ ಸಂದರ್ಭದಲ್ಲಿ ಗಂಜಿಗಟ್ಟೆ ಕೃಷ್ಣಮೂರ್ತಿಯವರಿಂದ ಜನಪದ ಗೀತೆಗಳ ಗಾಯನ ಹಾಗೂ ಹಾಸ್ಯ ಸಾಹಿತಿ ಜಗನ್ನಾಥ್ ರವರಿಂದ ಹಾಸ್ಯ ಕಾರ್ಯಕ್ರಮ ನಡೆಯಿತು. ಶ್ರೀಮತಿ ಆಶಾ ಸುದರ್ಶನ ಪ್ರಾರ್ಥಿಸಿದರೆ, ಶಿಲ್ಪ ಸ್ವಾಗತಿಸಿದರು, ಜಲಜಾಕ್ಷಿ ಪ್ರಸ್ತಾವಿಕವಾಗಿ ಮಾತನಾಡಿದರು,

## ಫಾಸ್ಟ್ ನ್ಯೂಸ್

### ಕುರಿ ಮತ್ತು ಮೇಕೆ ಸಾಕಾಣಿಕೆ ತರಬೇತಿ

» **ದಾವಣಗೆರೆ**

ದಾವಣಗೆರೆ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರದಲ್ಲಿ ಆಧುನಿಕ ಕುರಿ ಮತ್ತು ಮೇಕೆ ಸಾಕಾಣಿಕೆ ತರಬೇತಿ ಏಪ್ರಿಲ್ 4 ಮತ್ತು 5 ರಂದು ಆಯೋಜಿಸಲಾಗಿದೆ. ಆಸಕ್ತ ರೈತರು ಆಧಾರ್ ಕಾರ್ಡ್ ಜೆರಾಕ್ಸ್, 2 ಪಾಸ್ ಪೋರ್ಟ್ ಸೈಜ್ ಫೋಟೋ ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರು ಜಾತಿ ಪ್ರಮಾಣ ಪತ್ರದ ಜೆರಾಕ್ಸ್ ಪ್ರತಿಯೊಂದಿಗೆ ಹಾಜರಾಗಬೇಕು. ತರಬೇತಿ ಕಾರ್ಯಕ್ರಮಕ್ಕೆ ಯಾವುದೇ ಪ್ರೋತ್ಸಾಹಧನ ಮತ್ತು ಭತ್ಯೆಗಳನ್ನು ನೀಡಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರ, ದಾವಣಗೆರೆ ಕಚೇರಿ ದೂ.ಸಂ: 08192-233787 ಸಂಪರ್ಕಿಸಿ ಮಾಹಿತಿ ಪಡೆದುಕೊಳ್ಳಬಹುದು ಎಂದು ಪಶುವೈದ್ಯಾಧಿಕಾರಿಗಳು ತಿಳಿಸಿದ್ದಾರೆ.

### ಜಿಲ್ಲಾ ಮಟ್ಟದ ಛಾಯಾಚಿತ್ರಗಳ ಸ್ಪರ್ಧೆ

» **ದಾವಣಗೆರೆ**

ಪ್ರವಾಸೋದ್ಯಮ ಇಲಾಖೆ ವತಿಯಿಂದ ದೇಖೋ ಅಪ್ನ ದೇಶ್ ಫೋಟೋ ಕಂಟೆಸ್ಟ್-2025 ಸ್ಪರ್ಧೆಯನ್ನು ಏರ್ಪಡಿಸಲಾಗಿದೆ. ಪ್ರವಾಸೋದ್ಯಮವನ್ನು ಇನ್ನಷ್ಟು ಮೇಲ್ದರ್ಜೆಗೇರಿಸಲು ಹಾಗೂ ಎಲ್ಲಾ ವರ್ಗಗಳ ಅಂದರೆ ಧಾರ್ಮಿಕ, ಸಾಂಸ್ಕೃತಿಕ, ಪಾರಂಪರಿಕ, ಕರಕುಶಲ, ನೈಸರ್ಗಿಕ ಹಾಗೂ ವನ್ಯಜೀವಿ ಮತ್ತು ಸಹಾಸ ಚಟುವಟಿಕೆಗಳು ಹಾಗೂ ಇತರೆ ಪ್ರವಾಸಿ ತಾಣಗಳನ್ನು ಗುರಿತಿಸಿ, ವಿಶ್ವ ದರ್ಜೆಯಲ್ಲಿ ಅಭಿವೃದ್ಧಿ ಪಡಿಸಲು ಡಿಸ್ಕವರಿ ದಿ ಬ್ಯೂಟಿ ಆಫ್ ಇಂಡಿಯಾ ಶೀರ್ಷಿಕೆಯಡಿಯಲ್ಲಿ ಈ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಜಿಲ್ಲೆಯ ಅತ್ಯುತ್ತಮ ಛಾಯಾಚಿತ್ರಗಳನ್ನು ಸೆರೆಹಿಡಿದು, ಪ್ರವಾಸಿ ತಾಣಗಳ ಕಿರು ವಿವರಣೆಗಳೊಂದಗೆ Dekhoapnadeshphotos@gmail.com ಇಮೇಲ್ ಗೆ ಏಪ್ರಿಲ್ 7 ರೊಳಗಾಗಿ ಸಲ್ಲಿಸಬೇಕೆಂದು ಇಲಾಖೆಯ ಸಹಾಯಕ ನಿರ್ದೇಶಕರಾದ ಕಾವ್ಯ ತಿಳಿಸಿದ್ದಾರೆ.

### ಯುವಕ ಕಾಣೆ

» **ದಾವಣಗೆರೆ**

ನಗರದ ಬೂದಾಳ ರಸ್ತೆಯ ತಾಜ್ ಪ್ಯಾಲೇಸ್ ಹತ್ತಿರದ ನಿವಾಸಿ ಮೊಹಮ್ಮದ್ ಸಾಹಿಲ್ ತಂದೆ ಮಹಮ್ಮದ್ ಸಮೀಯುಲ್ಲ (25 ವರ್ಷ) ಯುವಕ ಕಾಣೆಯಾದ ಕುರಿತು ಮಾರ್ಚ್ 25ರಂದು ಬಡಾವಣೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕಾಣೆಯಾದ ಮೊಹಮ್ಮದ್ ಸಾಹಿಲ್ 5.2 ಅಡಿ ಎತ್ತರ, ಕೋಲು ಮುಖ, ಕೆಂಪು ಬಣ್ಣ, ಕಾಲಿನ ಮಂಡಿ ಮೇಲೆ ಗಾಯದ ಗುರುತು ಹೊಂದಿದ್ದು, ಕನ್ನಡ, ಹಿಂದಿ ಮತ್ತು ಉರ್ದು ಭಾಷೆ ಮಾತನಾಡುವರು. ಕಾಣೆಯಾದ ಸಂದರ್ಭದಲ್ಲಿ ಕಪ್ಪು ಕಲರ್ ಜೀನ್ಸ್ ಪ್ಯಾಂಟ್, ಬಿಳಿ ಕಲರ್ ಹೂವಿನ ಶರ್ಟ್ ಧರಿಸಿರುತ್ತಾನೆ. ಈ ಮೇಲ್ಕಂಡ ಚಹರೆಯುಳ್ಳ ವ್ಯಕ್ತಿಯ ಮಾಹಿತಿ ಕಂಡು ಬಂದಲ್ಲಿ ಬಡಾವಣೆ ಪೊಲೀಸ್ ಠಾಣೆ ದೂರವಾಣಿ ಸಂ : 08192-272012, ಡಿವೈಎಸ್‌ಪಿ ನಗರ ಕಛೇರಿ : 08192-259213, ಎಸ್.ಪಿ. ಕಛೇರಿ : 08192-253400, ಕಂಟ್ರೋಲ್ ರೂಂ ದಾವಣಗೆರೆ : 08192-253100 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

### ವಿದ್ಯುತ್ ವ್ಯತ್ಯಯ

» **ದಾವಣಗೆರೆ**

66/11 ಕೆವಿ ಶ್ಯಾಗಲೆ ವಿ.ವಿ. ಕೇಂದ್ರದಿಂದ ಹೊರಡುವ ಎಫ್.4 ಶ್ಯಾಗಲೆ ಮಾರ್ಗದ ಹಾಗೂ ಎಫ್.8 ಲೋಕಿಕೆರೆ ಮಾರ್ಗದಲ್ಲಿ ತುರ್ತು ನಿರ್ವಹಣೆಯ ಕಾಮಗಾರಿ ಇರುವುದರಿಂದ ಏ.3 ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಲೋಕಿಕೆರೆ, ಯಲ್ಲಮ್ಮನಗರ, ಕೋಡಿಹಳ್ಳಿ ಮತ್ತು ಸುತ್ತಮುತ್ತ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂ ಪ್ರಕಟಣೆ ತಿಳಿಸಿದೆ.

### ರಾಜಪ್ಪನಿಗೆ ಸಮಾಜ ಸೇವಾ ರತ್ನ ಪ್ರಶಸ್ತಿ



» **ಚಿತ್ರದುರ್ಗ**

ಪವರ್ ಸ್ಟಾರ್ ಪುನಿತ್‌ರಾಜ್‌ಕುಮಾರ್‌ರವರ 50 ನೇ ಹುಟ್ಟುಹಬ್ಬದ ಅಂಗವಾಗಿ ಬೆಂಗಳೂರಿನ ರವೀಂದ್ರ ಕಲಾ ಕ್ಷೇತ್ರದಲ್ಲಿ ಇತ್ತೀಚೆಗೆ ನಡೆದ ಸಮಾರಂಭದಲ್ಲಿ ಮರಡಿಹಳ್ಳಿ ಗ್ರಾಮದ ಪಿ.ಎಸ್.ಐ.ಪಿ.ಎಲ್. ಶುಶ್ರೂಷಕ ಅಧಿಕಾರಿ ಜಿ.ರಾಜಪ್ಪನಿಗೆ ರಾಜ್ಯ ಮಟ್ಟದ ಸಮಾಜ ಸೇವಾ ರತ್ನ ಪ್ರಶಸ್ತಿ ನೀಡಿ ಗೌರವಿಸಲಾಯಿತು.
ಕನ್ನಡ ಫಿಲಂ ಚೇಂಬರ್ ಅಧ್ಯಕ್ಷ ರವೀಂದ್ರ ಹಾಗೂ ಸಿನಿಮ ಕಲಾವಿದರು, ಅಪ್ಪು ಅಭಿಮಾನಿಗಳು ಈ ಸಂದರ್ಭದಲ್ಲಿ ಹಾಜರಿದ್ದರು.

**ದಾವಣಗೆರೆ ವಿಶ್ವವಿದ್ಯಾಲಯದ 12ನೇ ಘಟಿಕೋತ್ಸವದಲ್ಲಿ ವಿದ್ಯಾರ್ಥಿಗಳಿಗೆ ಕರೆ ನೀಡಿದ ರಾಜ್ಯಪಾಲರು**

# ಕನಸು ನನಸಾಗಲು ನಿರಂತರ ಪ್ರಯತ್ನ ಇರಲಿ, ಶಿಕ್ಷಣದ ಮೂಲಕ ಸದೃಢ ರಾಷ್ಟ್ರಕ್ಕೆ ಕೊಡುಗೆ ನೀಡಿ





» **ದಾವಣಗೆರೆ**

ವಿದ್ಯಾರ್ಥಿ ಜೀವನದ ಕನಸುಗಳನ್ನು ನನಸಾಗಿಸಲು ನಿರಂತರ ಪ್ರಯತ್ನ ಬಹಳ ಮುಖ್ಯವಾಗಿರುತ್ತದೆ. ಶಿಕ್ಷಣವು ವ್ಯಕ್ತಿಯ ಜೀವನದಲ್ಲಿ ಹೊಸ ಆಲೋಚನೆಗಳು, ಜ್ಞಾನ ಮತ್ತು ಸಾಧ್ಯತೆಗಳನ್ನು ತುಂಬುವ ನಿರಂತರ ಪ್ರಯಾಣವಾಗಿದೆ. ದಾವಣಗೆರೆ ವಿಶ್ವವಿದ್ಯಾನಿಲಯ 2009 ರಲ್ಲಿ ಸ್ಥಾಪನೆಯಾಗಿದ್ದರೂ ಪ್ರಗತಿಗೆ ಪೂರಕವಾಗಿದೆ ಎಂದು ಕರ್ನಾಟಕದ ಗೌರವಾನ್ವಿತ ರಾಜ್ಯಪಾಲರಾದ ಶ್ರೀ ಥಾವರ್ ಚಂದ್ ಗೆಹ್ಲೋಟ್ ಅವರು ಹೇಳಿದರು.

ಅವರು ಏಪ್ರಿಲ್ 2 ರಂದು ಬುಧವಾರ ತೋಳಹುಣಸೆಯಲ್ಲಿನ ದಾವಣಗೆರೆ ವಿಶ್ವವಿದ್ಯಾಲಯದ 12ನೇ ಘಟಿಕೋತ್ಸವ ಸಮಾರಂಭದಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಶಿಕ್ಷಣವು ನಮಗೆ ಉದ್ಯೋಗದ ಜೊತೆಗೆ ನೈತಿಕತೆ, ಸಹಾನುಭೂತಿ ಮತ್ತು ಸಾಮಾಜಿಕ ಜವಾಬ್ದಾರಿಯನ್ನು ಒದಗಿಸುತ್ತದೆ. ಹಾಗಾಗಿ ವಿದ್ಯಾರ್ಥಿಗಳು ಶಿಕ್ಷಣದ ಮೂಲಕ ಜ್ಞಾನ ಪಡೆದು ಸದೃಢ ರಾಷ್ಟ್ರ ನಿರ್ಮಾಣಕ್ಕೆ ಕೊಡುಗೆ ನೀಡಬೇಕು" ಎಂದರು.

ಶ್ರೇಷ್ಠ ವಿಜ್ಞಾನಿ ಮತ್ತು ಮಾಜಿ ರಾಷ್ಟ್ರಪತಿ ಡಾ.ಎ.ಪಿ.ಜೆ. ಅಬ್ದುಲ್ ಕಲಾಂ ಅವರು ಕನಸು ಎಂದರೆ ಮಲಗಿರುವಾಗ ಕಾಣುವುದಲ್ಲ, ಅದು ಎಂದಿಗೂ ನನಸಾಗುವುದಿಲ್ಲ. ನಿದ್ರೆ ಮಾಡದೇ ಕಾಣುವ ಕನಸು ಗುರಿಮುಟ್ಟುವರೆಗೆ ಅದು ನಿಮ್ಮನ್ನು ನಿದ್ದೆ ಮಾಡಲು ಬಿಡುವುದಿಲ್ಲ. ಅಂತಹ ಕನಸು ನಿಮ್ಮದಾಗಲಿ. ವಿದ್ಯಾವಂತ ಯುವಕರು ಮಾತ್ರ ಸಮಾಜದಲ್ಲಿ ಸಕಾರಾತ್ಮಕ ಬದಲಾವಣೆ ತರಬಲ್ಲರು. ನೀವು ಯಾವುದೇ ಕ್ಷೇತ್ರ ಆಯ್ಕೆ ಮಾಡಿಕೊಂಡರೂ ನಿಮ್ಮ ಪ್ರಯತ್ನದಿಂದ ದೇಶವು ಪ್ರಗತಿ ಸಾಧಿಸುತ್ತದೆ ಎಂದು ಹೇಳಿದರು. ಪ್ರಸ್ತುತ ಜಗತ್ತು ವೇಗವಾಗಿ ಬದಲಾಗುತ್ತಿದೆ, ಕೃತಕ ಬುದ್ಧಿಮತ್ತೆ, ದತ್ತಾಂಶ ವಿಜ್ಞಾನ, ಸುಸ್ಥಿರ ಅಭಿವೃದ್ಧಿ ಮತ್ತು ಉದ್ಯಮಶೀಲತೆಯಂತಹ ಕ್ಷೇತ್ರಗಳು ನಮ್ಮ ಜೀವನದ ಮೇಲೆ ಪ್ರಭಾವ ಬೀರುತ್ತಿವೆ. ಇತ್ತೀಚಿನ ತಂತ್ರಜ್ಞಾನಗಳು ಮತ್ತು ಆಲೋಚನೆಗಳೊಂದಿಗೆ ನೀವು ಯಾವಾಗಲೂ ನಿಮ್ಮನ್ನು ನವೀಕೃತವಾಗಿರಿಸಿಕೊಳ್ಳಬೇಕು. ಸ್ವಾತಂತ್ರ್ಯದ ನಂತರ ದೇಶವು ಎಲ್ಲಾ ಕ್ಷೇತ್ರಗಳಲ್ಲಿ ಅಭೂತಪೂರ್ವ ಪ್ರಗತಿಯನ್ನು ಸಾಧಿಸಿದೆ. ಈಗ ದೇಶದ ಆರ್ಥಿಕತೆಯು ಪ್ರಬಲವಾಗಿದ್ದು ವಿಶ್ವದ 5 ನೇ ಅತಿದೊಡ್ಡ ಆರ್ಥಿಕತೆಯಾಗಿದೆ. ಇದನ್ನು ಮತ್ತಷ್ಟು ಬಲಪಡಿಸಲು ಮತ್ತು ದೇಶವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರಗಳ ಮುಂಚೂಣಿಗೆ ತರಲು ನಿಮ್ಮ ಕೊಡುಗೆ ಬಹಳ ಮುಖ್ಯವಾಗಿದೆ ಎಂದು ವಿದ್ಯಾರ್ಥಿಗಳಿಗೆ ತಿಳಿಸಿದರು.

ತಾಪಮಾನ ವರ್ಷದಿಂದ ವರ್ಷಕ್ಕೆ ಹೆಚ್ಚಳವಾಗುತ್ತಿರುವುದರಿಂದ ಇಂತಹ ಪರಿಸರ ಅಸಮತೋಲನದ ಗಂಭೀರ ಸಮಸ್ಯೆಯ ಬಗ್ಗೆ ಯೋಚಿಸಬೇಕು. ಇದಕ್ಕಾಗಿ ನೀರು, ಅರಣ್ಯ ಮತ್ತು ವಾಯು ಸಂರಕ್ಷಣೆಯ ನಿಟ್ಟಿನಲ್ಲಿ ಕೆಲಸ ಮಾಡುವ ಅವಶ್ಯಕತೆಯಿದೆ. ಶಿಕ್ಷಣದಿಂದ ಪಡೆದ ಜ್ಞಾನದೊಂದಿಗೆ, ಮುಂಬರುವ ಪೀಳಿಗೆಗೆ ಸ್ಫೂರ್ತಿಯ ಮೂಲವಾಗಿ ಏಕ್ ಭಾರತ್, ಶ್ರೇಷ್ಠ ಭಾರತ ಮತ್ತು ಸ್ವಾವಲಂಬಿ ಭಾರತ ನಿರ್ಮಾಣದಲ್ಲಿ ಭಾಗವಹಿಸಿ ಎಂದು ಕರೆ ನೀಡಿದರು.

ದಾವಣಗೆರೆ ವಿಶ್ವವಿದ್ಯಾಲಯವು ಕಡಿಮೆ ಅವಧಿಯಲ್ಲಿ ರಾಷ್ಟ್ರ ಮತ್ತು ಅಂತರಾಷ್ಟ್ರೀಯ ಮಟ್ಟದಲ್ಲಿ ತನ್ನದೇ ಆದ ಹೆಸರು ಗಳಿಸಿದೆ. ನಿರಂತರ ಮತ್ತು ಸಕಾರಾತ್ಮಕ ಪೂರ್ವಭಾವಿ ಪ್ರಯತ್ನಗಳ ಮೂಲಕ ಅಭಿವೃದ್ಧಿ ಹೊಂದಿದ ಭಾರತಕ್ಕೆ ಮಾನವಸಂಪನ್ಮೂಲಗಳನ್ನು ರೂಪಿಸುವಲ್ಲಿ ವಿಶ್ವವಿದ್ಯಾಲಯವು ಪ್ರಮುಖ ಪಾತ್ರ ವಹಿಸುತ್ತಿದೆ. ಘಟಿಕೋತ್ಸವದಲ್ಲಿ ಕಾಗಿನೆಲೆ ಪೀಠದ ಗೌರವಾನ್ವಿತ ಶ್ರೀ ಜಗದ್ಗುರು





ನಿರಂಜನಾನಂದಪುರಿ ಸ್ವಾಮೀಜಿ, ಸಮಾಜ, ಸಾರ್ವಜನಿಕ ಹಿತಾಸಕ್ತಿ ಮತ್ತು ದೇಶದ ಹಿತಾಸಕ್ತಿಯಲ್ಲಿ ಕೆಲಸ ಮಾಡುತ್ತಿರುವ ಶ್ರೀ. ಎಸ್.ಎ.ರವೀಂದ್ರನಾಥ್, ಮತ್ತು ಪ್ರೊ.ಎಸ್.ಆರ್.ನಿರಂಜನ ಅವರಿಗೆ ಗೌರವ ಡಾಕ್ಟರೇಟ್ ಪದವಿ ನೀಡಿ ಗೌರವಿಸಲಾಗಿದೆ. ಅವರಿಗೆ ಅಭಿನಂದಿಸುತ್ತ, ಸಾರ್ವಜನಿಕ ಹಿತಾಸಕ್ತಿ ಮತ್ತು ದೇಶದ ಹಿತಾಸಕ್ತಿಯಲ್ಲಿ ಕೆಲಸ ಮಾಡುವುದನ್ನು ಮುಂದುವರಿಸಬೇಕು ಎಂದು ಮನವಿ ಮಾಡಿದರು.

ಪದವಿಯನ್ನು ಪಡೆದ ಎಲ್ಲಾ ವಿದ್ಯಾರ್ಥಿಗಳು ವಿದ್ಯಾಭ್ಯಾಸದ ಸಮಯದಲ್ಲಿ ಅನೇಕ ಸವಾಲುಗಳನ್ನು ಎದುರಿಸಿರಬಹುದು, ಆದರೆ ನೀವು ಅವುಗಳನ್ನು ಜಯಿಸಿದ್ದೀರಿ. ಜೀವನದ ಅತ್ಯಮೂಲ್ಯ ಕ್ಷಣಗಳಲ್ಲಿ ಒಂದಾಗಿರುವ ಈ ವಿಶೇಷ ದಿನವು ನಿಮ್ಮ ಕಠಿಣ ಪರಿಶ್ರಮ ಮತ್ತುಸಮರ್ಪಣೆಯಸಂಭ್ರಮಾಚರಣೆಯ ಜೊತೆಗೆ ನಿಮ್ಮ ಕನಸುಗಳ ಹಾರಾಟ ಆರಂಭವಾಗಿದೆ. ಈಗ ನೀವು ಶಿಕ್ಷಣದ ಹಾದಿಯಿಂದ ಅನುಭವ ಮತ್ತು ಕ್ರಿಯೆಯ ಹಾದಿಗೆ ಹೆಜ್ಜೆ ಹಾಕಲಿದ್ದೀರಿ, ನಿಮ್ಮ ಹಾದಿ ಸುಗಮವಾಗಿರಲಿ ಘಟಿಕೋತ್ಸವದಲ್ಲಿ ಪದವಿ ಸ್ವೀಕರಿಸಿದ ಹಾಗೂ ರ್‍ಯಾಂಕ್ ಪಡೆದವರನ್ನು ಕುರಿತು ರಾಜ್ಯಪಾಲರು ಹಾರೈಸಿದರು.

ಘಟಿಕೋತ್ಸವದಲ್ಲಿ ಡಾ.ಎಂ.ಸಿ. ಸುಧಾಕರ್ ಮಾತನಾಡಿ ವಿಶ್ವವಿದ್ಯಾನಿಲಯಗಳಲ್ಲಿ ಗುಣಮಟ್ಟದ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಲು ಸರ್ಕಾರ ತನ್ನ ಬದ್ಧತೆಯನ್ನು ತೋರಿಸಿದೆ. ಶಿಕ್ಷಣದಲ್ಲಿ ಗುಣಮಟ್ಟವನ್ನು ಕಾಯ್ದುಕೊಳ್ಳಲು ವರದಿ ನೀಡಲು ಸಂಪುಟ ಉಪ ಸಮಿತಿಗೆ ವಹಿಸಲಾಗಿದೆ. ವರದಿ ಬಂದ ನಂತರ ಸುಧಾರಣಾ ಕ್ರಮಗಳನ್ನು ಕೈಗೊಳ್ಳಲಾಗುತ್ತದೆ.

ರಾಜ್ಯದ ಎಲ್ಲಾ ವಿಶ್ವವಿದ್ಯಾನಿಲಯಗಳಲ್ಲಿ ಮಂಜೂರಾದ 2500 ಹುದ್ದೆಗಳು ಖಾಲಿ ಇವೆ. ಮತ್ತು ಇಲ್ಲಿ ಹೊಸ ಕೋರ್ಸ್‌ಗಳನ್ನು ಆರಂಭಿಸಲಾಗಿದ್ದು ಈ ಹುದ್ದೆಗಳು ಸೇರಿದಂತೆ ಸುಮಾರು 3500 ರಷ್ಟು ಹುದ್ದೆಗಳು ವಿಶ್ವವಿದ್ಯಾನಿಲಯ ಮಟ್ಟದಲ್ಲಿ ಹುದ್ದೆಗಳು ಖಾಲಿ ಇವೆ. ಸಂಪುಟ ಉಪ ಸಮಿತಿ ವರದಿ ನೀಡಿದ ನಂತರ ಸರ್ಕಾರ ಮುಂದಿನ ಕ್ರಮ ಕೈಗೊಳ್ಳಲಿದೆ. ಗುಣಮಟ್ಟ ಆಧರಿಸಿ ಶಿಕ್ಷಣ ಸಂಸ್ಥೆಗಳನ್ನು ಆರಂಭಿಸಬೇಕು. ಆದರೆ ಹೆಚ್ಚಿನ ವಿಶ್ವವಿದ್ಯಾನಿಲಯಗಳನ್ನು ಸ್ಥಾಪಿಸುವುದರಿಂದ ಇದು ಸಾಧ್ಯವಾಗುವುದಿಲ್ಲ ಎಂಬ ಅಭಿಪ್ರಾಯವು ನನ್ನದಾಗಿದೆ ಎಂದರು.

ತಾಂತ್ರಿಕತೆಬಹಳಬದಲಾವಣೆಯಾಗಿದ್ದು ಕೃತಕ ಬುದ್ಧಿಮತ್ತೆ ಹಾಗೂ ಮಷಿನ್ ಲರ್ನಿಂಗ್, ಡಾಟಾ ಸೈನ್ಸ್ ಬಳಕೆ ಮಾಡಿಕೊಂಡು ಸ್ಪರ್ಧಾತ್ಮಕತೆಯನ್ನು ಬೆಳೆಸುವ ನಿಟ್ಟಿನಲ್ಲಿ ವಿದ್ಯಾರ್ಥಿಗಳಿಗೆ ಶಿಕ್ಷಣ ನೀಡಬೇಕಾಗಿದೆ ಎಂದರು.

ಮುಖ್ಯ ಅತಿಥಿ ಪದ್ಮಭೂಷಣ ಹಾಗೂ ಭಾರತೀಯ ವಿಜ್ಞಾನ ಸಂಸ್ಥೆಯ ಮಾಜಿ ನಿರ್ದೇಶಕರಾದ ಪ್ರೊ. ಪಿ.ಬಲರಾಮ್ ಘಟಿಕೋತ್ಸವ ಭಾಷಣ ಮಾಡಿದರು.

ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಬಿ.ಡಿ.ಕುಂಬಾರ್ ಸೇರಿದಂತೆ ವಿವಿಧ ಗಣ್ಯರು ಉಪಸ್ಥಿತರಿದ್ದರು.

ಘಟಿಕೋತ್ಸವದಲ್ಲಿ 57 ಅಭ್ಯರ್ಥಿಗಳಿಗೆ ಪಿಹೆಚ್‌ಡಿ ಪದವಿ ಪ್ರದಾನ ಮಾಡಲಾಯಿತು. 2023-24 ನೇ ಸಾಲಿನಲ್ಲಿ ಸ್ನಾತಕ ಪದವಿ ಪಡೆದ 12129 ವಿದ್ಯಾರ್ಥಿಗಳಿಗೆ ಮತ್ತು ಎಂ.ಎ, ಎಂ.ಎಸ್. ಡಬ್ಲ್ಯೂ, ಎಂ.ಕಾಂ, ಎಂ.ಬಿ.ಎ, ಎಂ.ಎಸ್ಸಿ, ಎಂ.ಪಿ.ಇಡಿ, ಎಂ.ಇಡಿ ಸ್ನಾತಕೋತ್ತರ 1919 ವಿದ್ಯಾರ್ಥಿಗಳಿಗೆ ಪದವಿ ಪಡೆಯಲು ಅರ್ಹರಾಗಿರುವರು. 87 ಸ್ವರ್ಣ ಪದಕಗಳಿದ್ದು ಸ್ನಾತಕ ಪದವಿಯಲ್ಲಿ 14 ವಿದ್ಯಾರ್ಥಿಗಳು 24 ಸ್ವರ್ಣ ಪದಕ ಪಡೆದರು. ಸ್ನಾತಕೋತ್ತರ ಪದವಿಯಲ್ಲಿ 32 ವಿದ್ಯಾರ್ಥಿಗಳು 63 ಸ್ವರ್ಣ ಪದಕ ಪಡೆದರು. ಎಂ.ಕಾಂ ನಲ್ಲಿ ರಿಯಾ ಐ.ಕೆ. ಇವರು ಅತೀ ಹೆಚ್ಚು ಅಂದರೆ 6 ಸ್ವರ್ಣ ಪದಕ ಪಡೆದರು.

# ಆಡಳಿತದಲ್ಲಿ ಸುಧಾರಣೆಯನ್ನು ತರುವ ಹಿನ್ನಲೆಯಲ್ಲಿ ಸಾಣೇಹಳ್ಳಿಯಲ್ಲಿ ಇಂದು ಸಭೆ

» **ಹೊಸದುರ್ಗ**

ಸರ್ವೋದಯಸಂಘಟನೆಯಿಂದಇತ್ತೀಚೆಗೆ 'ನಮ್ಮ ನಡೆ ಸರ್ವೋದಯದೆಡೆಗೆ' ಎನ್ನುವ ಪಾದಯಾತ್ರೆ ನಡೆದದ್ದು ಸಾರ್ವಜನಿಕರಿಗೆ ಗೊತ್ತು. ಆ ಸಂದರ್ಭದಲ್ಲಿ ಪರಿಸರ, ಕೃಷಿ, ಆರೋಗ್ಯ, ಶಿಕ್ಷಣ ಮತ್ತು ರಾಜಕೀಯ. ಈ ಐದು ಕ್ಷೇತ್ರಗಳಲ್ಲಿ ಸುಧಾರಣೆ ಆಗ್ಬೇಕು ಎನ್ನುವಂಥದ್ದು ಎಲ್ಲ ಸರ್ವೋದಯ ಸಂಘಟಕರ ಆಶಯವಾಗಿತ್ತು. ಈ ನೆಲೆಯಲ್ಲಿ ಇದೇ ತಿಂಗಳು 3 ಮತ್ತು 4 ರಂದು ಎರಡು ದಿನಗಳ ಕಾಲ ಆಡಳಿತದಲ್ಲಿ ಸುಧಾರಣೆಯನ್ನು ತರುವ ಹಿನ್ನಲೆಯಲ್ಲಿ ತಾಲೂಕಿನ ಸಾಣೇಹಳ್ಳಿಯ ಶ್ರೀ ಮಠದ ಆವರಣದಲ್ಲಿ ಅಪರೂಪದ ಸಭೆ ನಡೆಯಲಿದೆ ಎಂದು ಸರ್ವೋದಯ ಸಂಘಟನೆಯ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಈ ಸಭೆಯಲ್ಲಿ ಇದ್ದುದ್ದರಲ್ಲೇ ಆದರ್ಶಗಳನ್ನು ಮೈಗೂಡಿಸಿಕೊಂಡು ಅದರಂತೆ ಬಾಳಬೇಕೆನ್ನುವ ಸಂಕಲ್ಪ ಇರುವ ಕೆಲವರನ್ನು ಬರಮಾಡಿಕೊಳ್ಳುವಂಥ ಯೋಚನೆ ನಮ್ಮ ಸಂಘಟನೆಯದಾಗಿದ್ದು ಮುಖ್ಯವಾಗಿ ಡಿ ಆರ್ ಪಾಟೀಲ ಬಿ ಆರ್ ಪಾಟೀಲ, ಮುಖ್ಯಮಂತ್ರಿ ಚಂದ್ರು, ಬಸವರಾಜ ಹೊರಟ್ಟಿ, ಬಿ ಎಲ್ ಶಂಕರ್, ಎ ಟಿ ರಾಮಸ್ವಾಮಿ, ಶ್ರೀ ಎಂ ಪಿ ನಾಡಗೌಡ, ಶ್ರೀ ರವಿಕೃಷ್ಣಾರೆಡ್ಡಿ, ಶ್ರೀ ವಿ ಆರ್ ಸುದರ್ಶನ್, ಡಾ. ಗೋಪಾಲ ದಾಬಡೆ, ಶ್ರೀ ರವೀಂದ್ರಭಟ್ ಐನಕ್ಕೈ, ಶ್ರೀ ಮಹಿಮಾ ಜೆ ಪಟೇಲ್ , ಶ್ರೀ ಪ್ರೊ. ಎಸ್ ಜಿ ಸಿದ್ಧರಾಮಯ್ಯ, ಶ್ರೀ ಅಬ್ದುಲ್ ರೆಹಮಾನ ಪಾಷಾ, ಶ್ರೀ ಭೈರೇಗೌಡ, ಶ್ರೀ ರಾಜಾರಾಮ ತೋಳ್ಪಾಡಿ, ಶ್ರೀ ದಿಲೀಪ್ ಕಾಮತ್ ಮತ್ತಿತರರನ್ನು ಆಹ್ವಾನಿಸಿದ್ದೇವೆ. ಇವರೆಲ್ಲರೂ 3 ಮತ್ತು 4 ನೆಯ ತಾರೀಖಿನಂದು ಸಾಣೇಹಳ್ಳಿಯಲ್ಲಿ ವಿವಿಧ ವಿಚಾರಗಳ ಬಗ್ಗೆ ಮುಕ್ತವಾಗಿ ತಮ್ಮ ಚಿಂತನೆಯನ್ನು ಹಂಚಿಕೊಳ್ಳಲಿದ್ದಾರೆ.

ರಾಜಕೀಯ ಪರಿವರ್ತನೆ, ಬಸವಣ್ಣ ಕಂಡ ರಾಜಕಾರಣ, ಲೋಕನೀತಿ ಮತ್ತು ರಾಜನೀತಿ, ಯುವಕರ ಹೊಣೆಗಾರಿಕೆ, ರಾಜಕೀಯ ಸುಧಾರಣೆ, ಚುನಾವಣಾ ಸುಧಾರಣೆ ಇಂತಹ ಹಲವು ವಿಚಾರಗಳ ಬಗ್ಗೆ ಸಭೆಯಲ್ಲಿ ಗಂಭೀರವಾದ ಚಿಂತನೆ ನಡೆಯಲಿದೆ. ಇದು ಮುಂದೆ ಬರುವಂಥ ಚುನಾವಣೆಗೆ ಒಂದು ಬದಲಾವಣೆಗೆ ಪ್ರೇರಣೆಯನ್ನು ನೀಡಬೇಕು ಎನ್ನುವಂಥದ್ದೇ ಸರ್ವೋದಯ ಸಂಘಟಕರ ಮೂಲ ಆಶಯವಾಗಿದೆ. ಈ ಮೂಲ ಆಶಯಕ್ಕೆ ತಳಹದಿ ಈ ಸಭೆ ಎನ್ನುವಂಥದ್ದು ಎಲ್ಲರ ಭಾವನೆ. ನಂತರ ಬೇರೆ ಬೇರೆ ರೀತಿಯ ಸಭೆಗಳನ್ನು ಹಲವು ಕಡೆ ಮಾಡಿ ಕೇವಲ ರಾಜಕಾರಣಿಗಳನ್ನು ಎಚ್ಚರಿಸುವುದಷ್ಟೇ ಅಲ್ಲ; ಮತದಾರರನ್ನು ಪರಿವರ್ತಿಸುವುದೂ ಇದರ ಮೂಲ ಉದ್ದೇಶ.

**ಪ್ರಮುಖ ಸುದ್ದಿ**

**ಬಿಳಿ ವಸ್ತ್ರ ಧರಿಸಿ ನೇಗಿಲ ಹಿಡಿದು ಶ್ರದ್ಧಾ ಭಕ್ತಿಯಿಂದ ಉಳುವ ಯೋಗಿಯ ನೋಡಿಲ್ಲಿ**

# ವರ್ಷದ ಮೊದಲ ವ್ಯವಸಾಯಕ್ಕೆ ನೇಗಿಲ ಯೋಗಿಯ ನಮನ

» **ಹೊಸದುರ್ಗ**

ಉತ್ತಮ ಮಳೆ ಬೆಳೆ ಸಮೃದ್ಧಿಗಾಗಿ ಪ್ರಾರ್ಥಿಸಿ ರೈತರು ಹೊನ್ನಾರ ಹೂಡುವ ಮೂಲಕ ಮೊದಲ ವ್ಯವಸಾಯವನ್ನ ತಾಲ್ಲೂಕಿನ ಮಂಟೇನಹಳ್ಳಿ ಗ್ರಾಮದ ರೈತರು ಆರಂಭಿಸಿದರು.

ಯುಗಾದಿಯ ನಂತರ ತಾಲ್ಲೂಕಿನ ಕೊಂಡಾಪುರ, ಬಾಗೂರು, ಶ್ರೀರಂಗಪುರ ಸೇರಿದಂತೆ ಹಲವೆಡೆ ಹೊನ್ನಾರ ಸಂಭ್ರಮ ತುಸು ಜೋರಾಗಿಯೇ ಇರುತ್ತದೆ.

ಹೊನ್ನಾರ ಹೂಡಿ, ಎತ್ತುಗಳಿಗೆ ವಿಶೇಷ ಪೂಜೆ ಮಾಡಿ, ಹೊಲಕ್ಕೆ ಒಂದೆರಡು ಸಾಲು ಉಳುಮೆ ಮಾಡಿದರೆ, ಮಳೆ ಬೆಳೆ ಸಮೃದ್ಧವಾಗಿದ್ದು ರೈತ ನೆಮ್ಮದಿಯಿಂದ ಜೀವನ ನಡೆಸಬಹುದು ಎಂಬ ಉದ್ದೇಶದಿಂದ ಹೀಗೆ ಅನಾದಿಕಾಲದಿಂದಲೂ ನಡೆಸಿಕೊಂಡು ಬರಲಾಗುತಿದೆ. ಯುಗಾದಿ ನಂತರ ಊರಿನ ಗೌಡರೆಲ್ಲಾ ಸೇರಿ, ಹೊನ್ನಾರ ಹೂಡುವ ಬಗ್ಗೆ ಚರ್ಚಿಸುವರು. ಹಿಂದಿನ ಸಂಪ್ರದಾಯದಂತೆ ಗುರುಬಲ, ಹೆಸರು



ಬಲದ ಆಧಾರದ ಮೇಲೆ ಊರಿನವರೆಲ್ಲಾ ಸೇರಿ, ಸಮಯಕ್ಕೆ ಸರಿಯಾಗಿ ಒಂದು ಗಂಡು, ಒಂದು ಹೆಣ್ಣು, ಒಂದು ಜೊತೆ ಎತ್ತನ್ನು ಊರು ಹೊನ್ನಾರಕ್ಕೆ ನೇಮಿಸುವರು. ನಂತರ ಅವರು ಗ್ರಾಮ ದೇವರ ಮುಂದೆ ಎತ್ತು ಮತ್ತು ನೇಗಿಲುಗಳಿಗೆ ಪೂಜೆ ಮಾಡಿ, ನಿಗದಿತ ಸಮಯಕ್ಕೆ ಗ್ರಾಮದ ಸುತ್ತ ಹೊನ್ನಾರ ಮಾಡುವರು. ನಂತರ ಇತರೆ ರೈತರು ತಮ್ಮ ಜಮೀನುಗಳಲ್ಲಿ ಹೊನ್ನಾವರ ಹೂಡುವರು.

ಜಮೀನಿನ ಬಲಭಾಗದಲ್ಲಿ ಎತ್ತು ಮತ್ತು ನೇಗಿಲು ಗಳಿಗೆ ಪೂಜೆ ಸಲ್ಲಿಸಿ, ಬೆಳ್ಳಿ ಬಂಗಾರವನ್ನು ಎತ್ತಿನ ಪಾದ ಮತ್ತು ಭೂಮಿಗೆ ಮೂರು ಸಲ ಮುಟ್ಟಿಸಿ 'ಹರಳು ಹಣ ಹೆಚ್ಚಲಿ' ಎಂದು ಹೇಳುತ್ತೇವೆ. ನಂತರ ತುಂಬಿದ ಕೊಡದಲ್ಲಿ ನೀರು ಹಾಕುತ್ತಾ ಒಂದು ಸುತ್ತು ಬರುವರು, ಅದೇ ಜಾಗದಲ್ಲೆ ಉಳುಮೆ ಮಾಡುತ್ತಾ ಸಾಗುವರು. ಮೊದಲ ಹೊನ್ನಾರ ದೇವಾಲಯದ ಸುತ್ತ ಮೂರು ಸುತ್ತು ಬಂದಿತು. ನಂತರ ಗ್ರಾಮಸ್ಥರೆಲ್ಲಾ ಹೊನ್ನಾರ ಹೂಡುತ್ತಾರೆ. ಈಚೆಗೆ ಗ್ರಾಮೀಣ ಪ್ರದೇಶಗಳಲ್ಲಿ ಎತ್ತಿನ ಗಾಡಿ ಕಡಿಮೆಯಾಗುತ್ತಿವೆ. ಹಾಗಾಗಿ ಟ್ರ್ಯಾಕ್ಟರ್ ನಲ್ಲಿಯೇ ಮೊದಲ ಉಳುಮೆ ಆರಂಭಿಸಲಾಗುತ್ತಿದೆ. ಹೊನ್ನಾರ ಹೂಡುವುದು ಸಹ ಹಬ್ಬದ ರೀತಿಯಲ್ಲಿಯೇ ಆಚರಿಸಲಾಗುತ್ತದೆ.



# ಒಂದು ಆತ್ಮಾವಲೋಕನ...

ಅಪ್ಪ ಹೇಳುತ್ತಿದ್ದರು,
ಬೇಡುವ ಕೈ ನಿನ್ನದಾಗುವುದು ಬೇಡ,
ಕೊಡುವ ಕೈ ನಿನ್ನದಾಗಲಿ.....

ಅಮ್ಮ ಹೇಳುತ್ತಿದ್ದರು,
ಅವಮಾನ ಸಹಿಸಬೇಡ,
ಸ್ವಾಭಿಮಾನದ ಬದುಕು ನಿನ್ನದಾಗಲಿ,....

ಗುರುಗಳು ಹೇಳುತ್ತಿದ್ದರು,
ದೇಶದ್ರೋಹಿ ಸ್ವಾರ್ಥಿ ಆಗಬೇಡ,
ದೇಶಪ್ರೇಮಿ ತ್ಯಾಗ ಜೀವಿ ನೀನಾಗು......


ಮಾರ್ಗದರ್ಶಿಗಳು – ಹಿತೈಷಿಗಳು
ಹೇಳುತ್ತಿದ್ದರು,
ದ್ವೇಷ ಭಾವನೆ ತೊಡೆದು ಹಾಕು,
ಪ್ರೀತಿಯ ಭಾಷೆ ನಿನ್ನದಾಗಲಿ.....

ನೀತಿ ಕಥೆಗಳಲ್ಲಿ ಓದುತ್ತಿದ್ದೆ,
ಪರರ ಸ್ವತ್ತು, ಪರ ಸ್ತ್ರೀ ಮೇಲಿನ ಮೋಹ,
ಅನೈತಿಕ, ಅಸಹ್ಯಕ್ಕೆ ಸಮಾನ,
ದುಡಿದ ಶ್ರಮದ ಫಲ ಮಾತ್ರ ನಿನ್ನದಾಗಲಿ......

ಹಿರಿಯರು ಹೇಳುತ್ತಿದ್ದರು,
ಮೋಸ ವಂಚನೆ ಕಳ್ಳತನ ನಿನ್ನ ಬಳಿ
ಸುಳಿಯದಿರಲಿ,
ಸ್ನೇಹ ವಿಶ್ವಾಸ ತಾಳ್ಮೆ ನಿನ್ನಿಂದ
ಅಳಿಯದಿರಲಿ......

ಪುಸ್ತಕಗಳಲ್ಲಿ ಬರೆದಿದ್ದರು,
ನಿನ್ನಲ್ಲಿರುವ ಹಣ ಆಸ್ತಿ ಯಾವಾಗ ಬೇಕಾದರೂ
ನಾಶವಾಗಬಹುದು.
ಆದರೆ, ನೀನು ಕಲಿತಿರುವ ವಿದ್ಯೆ ನಿನ್ನನ್ನು
ಕೊನೆಯವರೆಗೂ ಕಾಪಾಡುತ್ತದೆ......

ಈಗಲೂ ಇದು ಪ್ರಸ್ತುತವೇ ?
ನಮ್ಮ ಮಕ್ಕಳಿಗೆ ಇದನ್ನು ಈಗಲೂ
ಕಲಿಸುತ್ತಿದ್ದೇವೆಯೇ ?
ಇದು ಸಾರ್ವಕಾಲಿಕ ಸತ್ಯವೇ ?
ಬದಲಾವಣೆ ಅವಶ್ಯವೇ ?
ಆಧುನಿಕ ಸ್ಪರ್ಧಾತ್ಮಕ ಜಗತ್ತಿನಲ್ಲಿ ಇದನ್ನು ನಮ್ಮ
ಮಕ್ಕಳಿಗೆ ಕಲಿಸುವುದರಿಂದ ಅವರಿಗೆ ಯಶಸ್ಸು
ಸಿಗುವುದೆ ? ಅಥವಾ ವಾಸ್ತವದಲ್ಲಿ ಗೊಂದಲಕ್ಕೆ
ಒಳಗಾಗುವರೆ ?,......



ಒಳ್ಳೆಯ ಮನಸ್ಸಿನವರಿಗೆ ಎಲ್ಲವೂ ಒಳ್ಳೆಯದೇ
ಆಗುತ್ತದೆ. ನಿಜವೇ?.....,

ನಾವು ಏನು ದಾನ ಮಾಡುತ್ತೇವೆಯೋ ಅದರ
ಎರಡು ಪಟ್ಟು ನಮಗೆ ವಾಪಸ್ಸು ಬರುತ್ತದೆ,
ಸತ್ಯವೆ ?.....,

ಒಳ್ಳೆಯವರಿಗೆ ಒಳ್ಳೆಯದು ಕೆಟ್ಟವರಿಗೆ ಕೆಟ್ಟದ್ದು
ಆಗುತ್ತದೆ. ವಾಸ್ತವವೇ ?......,

ನಾವು ಬದಲಾದರೆ ಜಗತ್ತೇ ಬದಲಾಗುತ್ತದೆ,
ಇದು ಪ್ರಾಯೋಗಿಕವೇ ?.....,

ಇಂದಿನ ಎಲ್ಲಾ ಕಷ್ಟ ಸುಖಗಳಿಗೂ
ಹಿಂದಿನ ಜನ್ಮದ ಪಾಪ ಪುಣ್ಯಗಳೇ ಕಾರಣ
ನಂಬಬಹುದೇ ?.....,

ಗಂಡು ಹೆಣ್ಣಿನ ಸಂಬಂಧ ಪೂರ್ವ ನಿಯೋಜಿತ
ಋಣಾನುಬಂಧ, ಸರಿಯೇ ?.....,
ಗಂಡ ಹೆಂಡತಿ ಸಂಬಂಧ ಏಳು ಜನುಮಗಳ
ಅನುಭಂದ, ಹೌದೇ ?.....,

ಅನ್ನದ ಪ್ರತಿ ಅಗುಳಿನ ಮೇಲೂ ತಿನ್ನುವವನ
ಹೆಸರು ಬರೆದಿರುತ್ತದೆ, ಗೊತ್ತೇ ?.....,

ಅಪಘಾತ, ಆಕಸ್ಮಿಕ, ಅನಾರೋಗ್ಯದ ಸಾವು
ನಮ್ಮ ಹಣೆಬರಹ, ಒಪ್ಪೋಣವೇ ?......,

ಬದುಕಿನ ಎಲ್ಲಾ ಘಟನೆಗಳೂ ಪೂರ್ವ
ನಿರ್ಧಾರಿತ, ಪ್ರಶ್ನಿಸಬಾರದೇ ?.......,

ನಮ್ಮನ್ನು ಕಾಡುವ ಈ ಮನಸ್ಥಿತಿಗೆ
ಸಮಾಧಾನಕರ ಉತ್ತರಬೇಕಿದೆ..............

ಹೊಟ್ಟೆ ತುಂಬಿದ ಶ್ರೀಮಂತರು,
ವೇದಾಧ್ಯಯನ ಪಂಡಿತರು,
ಬೈಬಲ್ ಪ್ರಚಾರಕರು,
ಖುರಾನ್ ಆರಾಧಕರು,
ವಿಭೂತಿ ಮಠಾಧೀಶರು,
ಪುನರ್ಜನ್ಮ ಸೃಷ್ಟಿಕರ್ತರು,
ಜ್ಯೋತಿಷಿಗಳು,
ವಿಚಾರವಾದಿಗಳು,
ವಿಜ್ಞಾನಿಗಳ ಉತ್ತರಗಳು ನನಗೆ ಬೇಡ,.....,

ಬೀದಿಯಲ್ಲಿ ಸಾಮೂಹಿಕ ಅತ್ಯಾಚಾರಕ್ಕೆ
ಒಳಗಾದ ಯುವತಿಯಿಂದ ಉತ್ತರ ಬೇಕಿದೆ......,

ಹುತಾತ್ಮ ಯೋಧನ ಹೆಂಡತಿಯಿಂದ ಉತ್ತರ
ಬೇಕಿದೆ,......,

ಆತ್ಮಹತ್ಯೆ ಮಾಡಿಕೊಂಡ ರೈತನ ಮಗನಿಂದ
ಉತ್ತರ ಬೇಕಿದೆ,.....,

ಬಸ್ ನಿಲ್ದಾಣದಲ್ಲಿ ದಿನ ಕಳೆಯುವ
ಅನಾಥನಿಂದ ಉತ್ತರ ಬೇಕಿದೆ,......,

ಗಂಡನಿಂದಲೇ ಏಡ್ಸ್ ಬಂದು ಈಗ
ಆತನಿಂದಲೇ ಪರಿತ್ಯಕ್ತಳಾದ ಮಹಿಳೆಯಿಂದ
ಉತ್ತರ ಬೇಕಿದೆ,.....,

ಮಾನವೀಯತೆಯಿಂದ ವಿಧುವೆಗೆ ಬದುಕು
ನೀಡಿ ಈಗ ವರದಕ್ಷಿಣೆ ಆರೋಪದಲ್ಲಿ ಜೈಲಿನಲ್ಲಿ
ದಿನದೂಡುತ್ತಿರುವ ಯುವಕನಿಂದ ಉತ್ತರ
ಬೇಕಿದೆ,....,

ತನ್ನದೆಲ್ಲವನ್ನೂ ಗಲಭೆಯಲ್ಲಿ ಕಳೆದುಕೊಂಡ
ವ್ಯಕ್ತಿಯ ಉತ್ತರ ಬೇಕಿದೆ,.....,

ತಮ್ಮ ಸರ್ವಸ್ವವನ್ನೂ ತಮ್ಮ ನಾಲ್ಕು ಮಕ್ಕಳಿಗಾಗಿ
ತ್ಯಾಗಮಾಡಿ ಈಗ ಅವರಿಂದ ತಿರಸ್ಕೃತರಾಗಿ
ವೃಧ್ಧಾಶ್ರಮದಲ್ಲಿ ಬದುಕುತ್ತಿರುವ ತಂದೆಯಿಂದ
ಉತ್ತರ ಬೇಕಿದೆ,....,

ಪ್ರಾಮಾಣಿಕರಾಗಿದ್ದುದರಿಂಲೇ ತನ್ನ
ಸಹಚರರಿಂದ ಕಿರುಕುಳಕ್ಕೊಳಗಾಗಿ ಸೇವೆಯಿಂದ
ವಜಾಗೊಂಡ ಸರ್ಕಾರಿ ಅಧಿಕಾರಿಯಿಂದ
ಉತ್ತರ ಬೇಕಿದೆ,......,

ಅವರ ಉತ್ತರಗಳು ಆಶಾದಾಯಕವಾಗಿದ್ದರೆ
ಇವನ್ನೆಲ್ಲಾ ಮತ್ತೊಮ್ಮೆ ವಾಸ್ತವದ ವಿಮರ್ಶೆಗೊ
ಳಪಡಿಸಬಹುದು......,

ಇಲ್ಲದಿದ್ದರೆ ಇನ್ನೆಷ್ಟು ದಿನ ಈ ಭ್ರಮೆಗಳೊಂದಿಗೆ
ಹೊಂದಾಣಿಕೆ ಮಾಡಿಕೊಂಡು
ಮುಂದುವರಿಯುವುದು......,

ಅಥವಾ,
ಮೇಲೆ ಹೇಳಿದ ಎಲ್ಲವೂ ಸತ್ಯ. ನಿಮಗೆ
ತಿಳಿವಳಿಕೆಯ ಕೊರತೆಯಿದೆ ಎನ್ನುವುದಾದರೆ
ನಿಮಗೆ ಧನ್ಯವಾದಗಳು....

ನಿಮ್ಮ ಅದೃಷ್ಟ ನಮಗಿಲ್ಲ....


ಒಳ್ಳೆಯದೆಲ್ಲವೂ ಒಳ್ಳೆಯದಾಗಿ ಇನ್ನೂ
ಉಳಿದಿದೆಯೇ ?....,

ಮೌಲ್ಯಗಳ ಪುನರ್ ಸ್ಥಾಪನೆಗಾಗಿ ಮಕ್ಕಳಿಗೆ
ನಾವು ನೈತಿಕ ಶಿಕ್ಷಣದ ಪಾಠಗಳಲ್ಲಿ ಏನು
ಹೇಳಿಕೊಡಬೇಕು ?.....,

ಹಳೆಯದು ಮತ್ತು ಹೊಸದರ ಸಮ್ಮಿಲನ
ಸಾಧಿಸುವುದು ಹೇಗೆ ?,.......,
ಈ ಪ್ರಶ್ನೆಗಳಿಗೆ ಉತ್ತರ ಹುಡುಕುವ ದಿಕ್ಕಿನಲ್ಲಿ
ನಮ್ಮ ಪ್ರಯತ್ನ ಸಾಗಲಿ......,

ಮುಂದಿನ ಪೀಳಿಗೆಯ ಭವಿಷ್ಯದ ದೃಷ್ಟಿಯಿಂದ
ಇದು ಅತ್ಯವಶ್ಯ..................,

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,
ಜನರ ಜೀವನಮಟ್ಟ ಸುಧಾರಣೆಯ
ಗುರಿಯೊಂದಿಗೆ,
ಮನಗಳಲ್ಲಿ, ಮನೆಗಳಲ್ಲಿ, ಮತಗಳಲ್ಲಿ,
ಪರಿವರ್ತನೆಗಾಗಿ,
ಮನಸ್ಸುಗಳ ಅಂತರಂಗದ ಚಳವಳಿ,



» ಲೇಖನ
ವಿವೇಕಾನಂದ.
ಹೆಚ್.ಕೆ.
9844013068

## ಆಶಾ ಕಿರಣ ಯೋಜನೆ: ನಾಗರೀಕರಿಗೆ ಉಚಿತ ಕನ್ನಡಕ ವಿತರಣೆ

» ಚಿತ್ರದುರ್ಗ

ಆಶಾ ಕಿರಣ ಯೋಜನೆ ಅಡಿಯಲ್ಲಿ 40 ವರ್ಷ ದಾಟಿದ ದೃಷ್ಟಿ ದೋಷವಿರುವ ನಾಗರೀಕರಿಗೆ ಉಚಿತ ಕನ್ನಡಕ ವಿತರಣೆ ಮಾಡಲಾಗುತ್ತಿದ್ದು, ಮುಂದಿನ ದಿನಗಳಲ್ಲಿ ಜಿಲ್ಲೆಯ ಎಲ್ಲಾ ಸಮುದಾಯ ಆರೋಗ್ಯ ಕೇಂದ್ರ, ತಾಲ್ಲೂಕು ಮಟ್ಟದ ಆಸ್ಪತ್ರೆ ಮತ್ತು ಜಿಲ್ಲಾ ಆಸ್ಪತ್ರೆಯಲ್ಲಿ ಆಶಾ ಕಿರಣ ದೃಷ್ಟಿ ಕೇಂದ್ರಗಳನ್ನು ತೆರೆಯಲಾಗುತ್ತದೆ ಎಂದು ಜಿಲ್ಲಾ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಡಾ.ಜಿ.ಓ.ನಾಗರಾಜ್ ಹೇಳಿದರು.

ಚಿತ್ರದುರ್ಗ ತಾಲ್ಲೂಕಿನ ಸಿರಿಗೆರೆ ಸಮುದಾಯ ಆರೋಗ್ಯ ಕೇಂದ್ರದ ಸಭಾಂಗಣದಲ್ಲಿ ಬುಧವಾರ ರಾಷ್ಟ್ರೀಯ ಅಂಧತ್ವ ನಿವಾರಣಾ ಕಾರ್ಯಕ್ರಮದ ಆಶಾ ಕಿರಣ ಯೋಜನೆಯಡಿ ಉಚಿತ ಕನ್ನಡಕ ವಿತರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.



ಆಶಾ ಕಿರಣ ಯೋಜನೆಯಡಿ ಮೊದಲ ಹಂತದಲ್ಲಿ ಮನೆ ಮನೆ ಭೇಟಿ, ಅಂಧತ್ವ ದೃಷ್ಟಿ ದೋಷ ತಪಾಸಣೆ ನಡೆಸಿ, ಜಿಲ್ಲೆಯಲ್ಲಿ 40ವರ್ಷ ಮೇಲ್ಪಟ್ಟ ಒಟ್ಟು 55000 ಫಲಾನುಭವಿಗಳನ್ನು ಮತ್ತು ಶಾಲಾ ವಿದ್ಯಾರ್ಥಿಗಳಲ್ಲಿ ಜಿಲ್ಲೆಯಲ್ಲಿ ಒಟ್ಟು 3600 ಫಲಾನುಭವಿಗಳು ಪತ್ತೆ ಹಚ್ಚಿ, ಗುರುತಿಸಿ ಗಣಕೀಕೃತ ಮಾಹಿತಿಯನ್ನು ಸರ್ಕಾರಕ್ಕೆ ಸಲ್ಲಿಸಲಾಯಿತು. ಈಗ ಆಶಾ ಕಿರಣ ಎರಡನೇಯ ಹಂತದಲ್ಲಿ ಉಚಿತ ಕನ್ನಡಕ ವಿತರಿಸುವ ಕಾರ್ಯಕ್ರಮ ನಡೆಯುತ್ತಿದೆ. ಮುಂದಿನ ದಿನಗಳಲ್ಲಿ ಜಿಲ್ಲೆಯ ಎಲ್ಲಾ ಸಮುದಾಯ ಆರೋಗ್ಯ ಕೇಂದ್ರಗಳು, ಎಲ್ಲಾ ತಾಲ್ಲೂಕು ಮಟ್ಟದ ಆಸ್ಪತ್ರೆ ಮತ್ತು ಜಿಲ್ಲಾ ಆಸ್ಪತ್ರೆಯಲ್ಲಿ ಆಶಾ ಕಿರಣ ದೃಷ್ಟಿ ಕೇಂದ್ರಗಳನ್ನು ತೆರೆಯಲಾಗುತ್ತದೆ. ಎಲ್ಲಾ ರೀತಿಯ ಕಣ್ಣಿನ ತೊಂದರೆಗಳ ತಪಾಸಣೆ, ಉಚಿತ ಚಿಕಿತ್ಸೆ ಅಗತ್ಯವಿದ್ದಲ್ಲಿ ಕನ್ನಡಕ ವಿತರಣೆ ಮಾಡಲಾಗುತ್ತದೆ. ನೇತ್ರ ಅಧಿಕಾರಿಗಳು ಎಲ್ಲಾ ಹಂತಗಳಲ್ಲಿ ನಿಮ್ಮೊಡನೆ ಇದ್ದು ಸಹಕರಿಸಲಿದ್ದಾರೆ ಎಂದರು.

ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಮಾತನಾಡಿ, ಸಿರಿಗೆರೆ ಸುತ್ತಮುತ್ತಲಿನ ಹಳ್ಳಿಗಳಲ್ಲಿ ಈಗಾಗಲೇ ಗುರುತಿಸಲಾದ 78 ಫಲಾನುಭವಿಗಳು (40 ವರ್ಷ ಮೇಲ್ಪಟ್ಟ) ಉಚಿತವಾಗಿ ಕನ್ನಡಕಗಳನ್ನು ವಿತರಿಸಿ, ಆಶಾ ಕಾರ್ಯಕರ್ತೆಯರು ತಮ್ಮ ದೈನಂದಿನ ಮನೆ ಭೇಟಿ ನಡೆಸಿದಾಗ ದೃಷ್ಟಿ ದೋಷ ಕಂಡುಬರುವ ಪ್ರಕರಣಗಳನ್ನು ಹತ್ತಿರದ ಸಮುದಾಯ ಆರೋಗ್ಯ ಕೇಂದ್ರಕ್ಕೆ ಕಳುಹಿಸಿ, ಉನ್ನತ ಮಟ್ಟದ ತಪಾಸಣಾ ಯಂತ್ರೋಪಕರಣಗಳು ಲಭ್ಯವಿದೆ. ನೇತ್ರಾಧಿಕಾರಿ ನಿಮ್ಮ ಕಣ್ಣುಗಳ ಪರೀಕ್ಷೆ ನಡೆಸಿ ಸೂಕ್ತ ಸಲಹೆ ಸೂಚನೆಗಳನ್ನು ನೀಡುತಾರೆ ಎಂದರು.

ಸಿರಿಗೆರೆ ಗ್ರಾಮ ಪಂಚಾಯಿತಿ ಅಧ್ಯಕ್ಷೆ ರೂಪಾ ಪ್ರದೀಪ್ ಅವರು ಸಾಂಕೇತಿಕವಾಗಿ ಕನ್ನಡಕ ವಿತರಿಸಿ, ಇಂತಹ ಜನಪರ ಯೋಜನೆಗಳ ಸದುಪಯೋಗ ಮಾಡಿಕೊಳ್ಳಿ ಎಂದು ಸಲಹೆ ನೀಡಿದರು. ಕಾರ್ಯಕ್ರಮದಲ್ಲಿ ವೈದ್ಯಾಧಿಕಾರಿಗಳಾದ ಡಾ.ತುಳಸಿರಂಗನಾಥ್, ಡಾ.ಪವಿತ್ರಾ, ಡಾ.ಶಿಲ್ಪಾ, ಎನ್.ಎಸ್.ಮಂಜುನಾಥ ಇದ್ದರು.

## ಜಯಂತಿ ಮಹೋತ್ಸವದಲ್ಲಿ ಆ್ಯಂಬುಲೆನ್ಸ್ ಜೊತೆ ವೈದ್ಯರ ವ್ಯವಸ್ಥೆ

**ಹೊಸದುರ್ಗ:** ಸರ್ಕಾರಿ ಕಾರ್ಯಕ್ರಮಗಳು ಮತ್ತು ಪ್ರತಿಯೊಂದು ಸಭೆಗೂ ಸಹಾ ತಾಲೂಕು ಮಟ್ಟದ ಎಲ್ಲಾ ಇಲಾಖೆಯ ಅಧಿಕಾರಿಗಳು ಗೈರಾದರೆ ಅಂತಹ ಅಧಿಕಾರಿಗಳಿಗೆ ನೋಟಿಸ್ ನೀಡಿ ಜಿಲ್ಲಾಧಿಕಾರಿಯವರಿಗೆ ವರದಿ ನೀಡಲಾಗುವುದು ಎಂದು ತಹಶಿಲ್ದಾರ್ ತಿರುಪತಿಪಾಟೀಲ್ ತಾಲೂಕು ಮಟ್ಟದ ಇಲಾಖಾ ಅಧಿಕಾರಿಗಳಿಗೆ ಛಾಟಿ ಏಟು ಬೀಸಿದರು. ಪಟ್ಟಣದ ತಾಲೂಕು ಕಛೇರಿ ಆವರಣದಲ್ಲಿ ಬುಧವಾರ ಆಯೋಜಿಸಲಾಗಿದ್ದ ಬಾಬು ಜಗಜೀವನ್‌ರಾವ್ ಮತ್ತು ಡಾ:ಬಾಬಾ ಅಂಬೇಡ್ಕರ್ ಜಯಂತಿ ಕಾರ್ಯಕ್ರಮದ ಪೂರ್ವಬಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಇಂದು ನಡೆದ ಪೂರ್ವಬಾವಿ ಸಭೆಯಲ್ಲಿ ದಲಿತ ಮುಖಂಡರುಗಳು ಅಧಿಕಾರಿಗಳ ವಿರುದ್ದ ಹರಿಹಾಯ್ದರು,ಇಂತಹ ಮಹತ್ವದ ಸಭೆ ಮತ್ತು ಸಮಾರಂಭಗಳಿಗೆ ಸಾಕಷ್ಟು ಇಲಾಖೆಯ ಅಧಿಕಾರಿಗಳು ಗೈರಾಗುತ್ತಾರೆ ಭದ್ರಾ ಮೇಲ್ದಂಡೆ, ಬೆಸ್ಕಾಂ. ಪಿ.ಅರ್.ಇ.ಡಿ ಸೇರಿದಂತೆ ಇಂತಹ ಅನೇಕ ಇಲಾಖೆಯ ಅಧಿಕಾರಿಗಳು ಪದೇ ಪದೇ ಗೈರಾಗುತ್ತಾರೆ ಇಂತವರ ವಿರುದ್ದ ಸೂಕ್ತ ಕ್ರಮ ಕೈಗೋಳ್ಳಿ ಎಂದು ತಹಶಿಲ್ದಾರ್ ಅವರಿಗೆ ತಾಕೀತು ಮಾಡಿದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T